# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –240 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:16–04–2025 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 240 | RNI No: KARKAN/2023/88462 | KA/SK/CTA-874/2024-2026 | Chitradurga | Date: 16-04-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಸರ್ಕಾರ ಮಟ್ಟದಲ್ಲಿ ಹಳೆ ಪಿಂಚಣಿ ವ್ಯವಸ್ಥೆ ಜಾರಿಗೆ ಪರಿಶೀಲನೆ: ಶಾಸಕ ಕೆ.ಸಿ.ವಿರೇಂದ್ರ 2
ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ರೈತ ವಿರೋಧಿ ನೀತಿ ಖಂಡಿಸಿ ಪ್ರತಿಭಟನೆ 3
ಏ.26 ರಂದು ಮಹಿಳಾ ಸ್ವಸಹಾಯ ಸಂಘಗಳ ಸಮಾವೇಶ; ಸಿಎಂ ಬಾಗಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಏ.19ರಂದು ನೇರ ನೇಮಕಾತಿ ಸಂದರ್ಶನ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದೇ ಏಪ್ರಿಲ್ 19ರಂದು ಬೆಳಿಗ್ಗೆ 10 ರಿಂದ 2 ರವರೆಗೆ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಈ ಮೇಳದಲ್ಲಿ 03ಕ್ಕೂ ಹೆಚ್ಚಿನ ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮಾ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ, ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು ಅಗತ್ಯ ದಾಖಲೆಗಳಾದ 5 ಬಯೋಡಾಟಾ ಪ್ರತಿಗಳು, ಫೋಟೋಸ್, ವಿದ್ಯಾರ್ಹತೆಯ ಜೆರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ಉದ್ಯೋಗ ವಿನಿಮಯ ಕೇಂದ್ರ ಕಚೇರಿ, ಚಿತ್ರದುರ್ಗ ದೂರವಾಣಿ ಸಂಖ್ಯೆ 7022459064, 9945587060, 8105619020 ಗೆ ಸಂಪರ್ಕಿಸಬಹುದು.

### ಸಾರಂಗದೇಶ್ವರ ರಾಷ್ಟ್ರೀಯ ವಿದ್ಯಾಭಿವೃದ್ಧಿ ಸಂಘ ರದ್ಧತಿಗೆ ಕ್ರಮ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಸದಾನಂದಯ್ಯ ಬಡಾವಣೆಯ ಶ್ರೀ ಜಗದ್ಗುರು ಸಾರಂಗದೇಶ್ವರ ರಾಷ್ಟ್ರೀಯ ವಿದ್ಯಾಭಿವೃದ್ಧಿ ಸಂಘವನ್ನು ರದ್ದುಪಡಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಶ್ರೀ ಜಗದ್ಗುರುಸಾರಂಗದೇಶ್ವರರಾಷ್ಟ್ರೀಯವಿದ್ಯಾಭಿವೃದ್ಧಿ ಸಂಘವನ್ನು (ಎಸ್‌ಓಆರ್.ಸಂಖ್ಯೆ:72/77–78) ರದ್ದುಗೊಳಿಸುವುದು ಸೂಕ್ತವೆಂದು ಆಡಳಿತಾಧಿಕಾರಿಗಳು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವುದರಿಂದ, ಸರ್ಕಾರವು ಈ ಬಗ್ಗೆ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ, ಈ ಸಂಸ್ಥೆಯನ್ನು ರದ್ದುಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಸಂಸ್ಥೆಯ ಕಾರ್ಯಕಾರಿ ಸಮಿತಿ ಸದಸ್ಯರಿಂದಾಗಲಿ, ಸದಸ್ಯರಿಂದಾಗಲಿ, ಸಾರ್ವಜನಿಕರಿಂದಾಗಲಿ ಏನಾದರೂ ಆಕ್ಷೇಪಣೆಗಳು, ಅವಹಾಲುಗಳು ಇದ್ದಲ್ಲಿ ಈ ಪ್ರಕಟಣೆಯ 15 ದಿನಗಳ ಒಳಗಾಗಿ ಸಲ್ಲಿಸಲು ಹಾಗೂ ಸಂಸ್ಥೆಯು ಯಾವುದಾದರು ಸ್ಥಿರಾಸ್ತಿ ಹೊಂದಿದ್ದಲ್ಲಿ ಮಾಹಿತಿಯನ್ನು ಜಿಲ್ಲಾ ಸಂಘಗಳ ನೊಂದಣಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ ಇವರಿಗೆ ಸಲ್ಲಿಸುವಂತೆ ಜಿಲ್ಲಾ ಸಂಘಗಳ ನೊಂದಣಾಧಿಕಾರಿ ಹಾಗೂ ಸಹಕಾರ ಸಂಘಗಳ ಉಪನಿಬಂಧಕರು ತಿಳಿಸಿದ್ದಾರೆ.

### ಉಪಲೋಕಾಯುಕ್ತಾರು ಜಿಲ್ಲೆಗೆ ಭೇಟಿ

» **ದಾವಣಗೆರೆ**

ನ್ಯಾಮಮೂರ್ತಿ ಹಾಗೂ ಉಪಲೋಕಾಯುಕ್ತರಾದ ಬಿ.ವೀರಪ್ಪ ಅವರು ಏಪ್ರಿಲ್ 22 ರಿಂದ 26 ರವರೆಗೆ ಐದು ದಿನಗಳ ಕಾಲ ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಏಪ್ರಿಲ್ 24 ರಂದು ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಸಾರ್ವಜನಿಕರಿಂದ ನೇರವಾಗಿ ದೂರು ಅರ್ಜಿಗಳನ್ನು ಸ್ವೀಕರಿಸುವರು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ತಿಳಿಸಿದರು. ಮಂಗಳವಾರ(ಏ.15) ರಂದು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಉಪಲೋಕಾಯುಕ್ತರ ಭೇಟಿ ಹಿನ್ನಲೆಯಲ್ಲಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ಏಪ್ರಿಲ್ 23 ರಂದು ವಿವಿಧ ಸ್ಥಳಗಳ ವೀಕ್ಷಣೆ ಹಾಗೂ ಇಲಾಖೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ಏ.24 ರಂದು ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆಯಿಂದ ಮ.1.30 ಹಾಗೂ ಮ.2.30 ರಿಂದ ಸಂಜೆ 5 ಗಂಟೆಯವರೆಗೆ ಸಾರ್ವಜನಿಕರಿಂದ ದೂರು ಹಾಗೂ ಅಹವಾಲು ಸ್ವೀಕರಿಸಿ ನೇರವಾಗಿ ವಿಚಾರಣೆ ನಡೆಸುವರು. ಏ.25 ರಂದು ವಿವಿಧ ಇಲಾಖೆಗಳಿಗೆ ಭೇಟಿ ನೀಡಿ ತುಂಗಭದ್ರಾ ಸಭಾಂಗಣದಲ್ಲಿ ಲೋಕಾಯುಕ್ತದಲ್ಲಿ ಬಾಕಿ ಇರುವ ಬಾಕಿ ಪ್ರಕರಣಗಳನ್ನು ದೂರುದಾರರ ಸಮಕ್ಷಮದಲ್ಲಿ ನೇರವಾಗಿ ವಿಚಾರಣೆ ನಡೆಸುವರು. ಸಾರ್ವಜನಿಕರು ಸರ್ಕಾರಿ ಇಲಾಖೆಗಳಲ್ಲಿ ಸಲ್ಲಿಸಿದ ಅರ್ಜಿಗಳನ್ನು ವಿಲೆಮಾಡದೇ ಬಾಕಿ ಇಟ್ಟಿರುವ ಬಗ್ಗೆ ಮತ್ತು ದುರಾಡಳಿತ, ಕರ್ತವ್ಯ ನಿರ್ವಹಣೆಯಲ್ಲಿ ವಿಫಲತೆ, ಯೋಜನೆಗಳು ಮತ್ತು ಸೌಲಭ್ಯಗಳನ್ನು ತಲುಪಿಸುವಲ್ಲಿ ವಿಫಲತೆ ಮತ್ತು ಅವ್ಯಹಾರಕ್ಕೆ ಸಂಬಂಧಿಸಿದ ಅರ್ಜಿಗಳನ್ನು ಸಲ್ಲಿಸಬಹುದು.

**ಜಿಲ್ಲೆಯಲ್ಲಿ 6741 ಅಭ್ಯರ್ಥಿಗಳು, 16 ಪರೀಕ್ಷಾ ಕೇಂದ್ರಗಳು– ಕಟ್ಟುನಿಟ್ಟಾಗಿ ಸೂಚನೆಗಳನ್ನು ಪಾಲಿಸಲು ಸೂಚನೆ**

# ಏ. 16, 17 ರಂದು ಸಿಇಟಿ ಪರೀಕ್ಷೆ

» **ಚಿತ್ರದುರ್ಗ**

ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಇದೇ ಏಪ್ರಿಲ್ 16 ಮತ್ತು 17 ರಂದು ಸಾಮಾನ್ಯ ಪ್ರವೇಶ ಪರೀಕ್ಷೆ ಚಿತ್ರದುರ್ಗ ನಗರದ 16 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಜಿಲ್ಲೆಯಲ್ಲಿ ಒಟ್ಟು 6741 ಅಭ್ಯರ್ಥಿಗಳು ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದಾರೆ.

ಚಿತ್ರದುರ್ಗ ನಗರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು, ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು, ಹೊಳಲ್ಕೆರೆ ರಸ್ತೆಯ ಎಸ್‌ಜೆಎಂ ಪದವಿಪೂರ್ವ ಕಾಲೇಜು, ಚೈತನ್ಯ ಪಿಯು ಕಾಲೇಜು, ಮಹಾರಾಣಿ ಪಿಯು ಕಾಲೇಜು, ಕಂಪಳರಂಗ ಪಿಯು ಕಾಲೇಜು, ಬೃಹನ್ಮಠ ಪಿಯು ಕಾಲೇಜು, ಪಿ.ಕೆ. ಹಳ್ಳಿಯ ಕೆಎಂಎಸ್ ಪಿಯು ಕಾಲೇಜು, ಡಾನ್ ಬೋಸ್ಕೋ ಪಿಯು ಕಾಲೇಜು, ಎಸ್‌ಆರ್‌ಎಸ್ ಪಿಯು ಕಾಲೇಜು, ವೆಸ್ಟರ್ನ್ ಹಿಲ್ಸ್ ಪಿಯು ಕಾಲೇಜು, ಎಂ.ಕೆ. ಹಟ್ಟಿ ಎಸ್‌ಜೆಎಂ ಪಿಯು ಕಾಲೇಜು, ಎಸ್‌ಜೆಎಂಐಟಿ, ಸರ್ಕಾರಿ ವಿಜ್ಞಾನ ಕಾಲೇಜು, ಸರ್ಕಾರಿ ಕಲಾ ಕಾಲೇಜು ಹಾಗೂ ನಮ್ಮ ಎಕ್ಸ್‌ಪರ್ಟ್ ಪಿಯು ಕಾಲೇಜು ಸೇರಿದಂತೆ ಒಟ್ಟು 16 ಪರೀಕ್ಷೆ ಕೇಂದ್ರಗಳಲ್ಲಿ ಒಟ್ಟು 6741 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಏಪ್ರಿಲ್ 16 ರಂದು ಬೆಳಿಗ್ಗೆ 10.30 ರಿಂದ 11.50 ರವರೆಗೆ ಭೌತಶಾಸ್ತ್ರ, ಮಧ್ಯಾಹ್ನ 2.30 ರಿಂದ 3.50 ರವರೆಗೆ ರಸಾಯನಶಾಸ್ತ್ರ ಹಾಗೂ ಏಪ್ರಿಲ್ 17ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 11.50 ರವರೆಗೆ ಗಣಿತಶಾಸ್ತ್ರ, ಮಧ್ಯಾಹ್ನ 2.30 ರಿಂದ 3.50 ರವರೆಗೆ ಜೀವಶಾಸ್ತ್ರ ವಿಷಯದ ಪರೀಕ್ಷೆ ನಡೆಯಲಿದೆ. ಜಿಲ್ಲೆಯಲ್ಲಿ ಯಾವುದೇ ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಕೇಂದ್ರಗಳು ಇರುವುದಿಲ್ಲ. ಪರೀಕ್ಷಾ ಕೇಂದ್ರದ ಸುತ್ತಮುತ್ತಲಿರುವ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಿಸಲು ಕ್ರಮ ಕೈಗೊಳ್ಳಲಾಗಿದ್ದು, ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತಪ್ರದೇಶ ಎಂದು ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.



**ವಸ್ತ್ರ ಸಂಹಿತೆ ಪಾಲನೆಗೆ ಸೂಚನೆ :** ಸಿಇಟಿ ಪರೀಕ್ಷೆ ಬರೆಯುವ ಪುರುಷ, ಮಹಿಳಾ ಅಭ್ಯರ್ಥಿಗಳು ವಸ್ತ್ರ ಸಂಹಿತೆ ಪರಿಪಾಲನೆ ಮಾಡಬೇಕು. ಪುರುಷ ಅಭ್ಯರ್ಥಿಗಳಿಗೆ ಪರೀಕ್ಷೆಗೆ ಪೂರ್ಣತೋಳಿನ ಶರ್ಟ್‌ಗಳನ್ನು ಅನುಮತಿಸಲಾಗುವುದಿಲ್ಲ, ಅರ್ಧತೋಳಿನ ಶರ್ಟ್ ಧರಿಸಬೇಕು. ಸಾಧ್ಯವಾದಷ್ಟು ಕಾಲರ್ ರಹಿತ ಸಾಧಾರಣ ಶರ್ಟ್, ಟೀ ಶರ್ಟ್ ಧರಿಸಬೇಕು. ಕುರ್ತಾ ಪೈಜಾನು, ಜೀನ್ಸ್ ಪ್ಯಾಂಟ್ ಧರಿಸುವಂತಿಲ್ಲ. ಜೇಬುಗಳು ಇಲ್ಲದಿರುವ, ಕಮ್ಮಿ ಜೇಬುಗಳಿರುವ ಪ್ಯಾಂಟ್ ಮತ್ತು ಸರಳ ಪ್ಯಾಂಟ್ ಧರಿಸಬೇಕು. ಬಟ್ಟೆಗಳು ಹಗುರವಾಗಿರಬೇಕು. ಜಿಪ್ ಪಾಕೆಟ್‌ಗಳು, ಪಾಕೆಟ್‌ಗಳು, ದೊಡ್ಡ ಬಟನ್‌ಗಳು ಮತ್ತು ವಿಸ್ತಾರವಾದ ಕಸೂತಿ ಬಟ್ಟೆಗಳಿರಬಾರದು. ಪರೀಕ್ಷಾ ಕೊಠಡಿಯಲ್ಲಿ ಶೂಗಳು ನಿಷಿದ್ಧವಾಗಿದ್ದು ಸ್ಯಾಂಡಲ್ ಅಥವಾ ತೆಳುವಾದ ಅಡಿಭಾಗದ ಚಪ್ಪಲಿಗಳನ್ನು ಧರಿಸಬೇಕು. ಕುತ್ತಿಗೆಯ ಸುತ್ತ ಯಾವುದೇ ಲೋಹದ ಆಭರಣ ಧರಿಸುವುದು ಅಥವಾ ಕಿವಿಯೋಲೆ, ಉಂಗುರಗಳು, ಕಡಗಗಳನ್ನು ಧರಿಸುವುದನ್ನು ನಿಷೇಧಿಸಲಾಗಿದೆ.

**ಮಹಿಳಾ ಅಭ್ಯರ್ಥಿಗಳು:** ವಿಸ್ತಾರವಾದ ಕಸೂತಿ, ಹೂಗಳು, ಬ್ರೂಚ್‌ಗಳು ಅಥವಾ ಬಟನ್‌ಗಳನ್ನು ಹೊಂದಿರುವ ಬಟ್ಟೆಗಳ ಧರಿಸುವುದು ನಿಷಿದ್ಧ, ಪೂರ್ಣ ತೋಳಿನ ಬಟ್ಟೆ, ಜೀನ್ಸ್ ಪ್ಯಾಂಟ್ ಧರಿಸಬಾರದು. ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು ಮುಜುಗರವಾಗದಂತೆ ಮತ್ತು ವಸ್ತ್ರ ಸಂಹಿತೆಯಂತೆ ಬಟ್ಟೆ ಧರಿಸಬೇಕು. ಹೀಲ್ಡ್ ಚಪ್ಪಲಿ, ಶೂಗಳನ್ನು ಧರಿಸಬಾರದು, ತೆಳುವಾದ ಅಡಿಪಾಯವಿರುವ ಚಪ್ಪಲಿ ಧರಿಸಬೇಕು. ಮಂಗಳಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ ಯಾವುದೇ ಲೋಹದ ಆಭರಣ ಧರಿಸುವಂತಿಲ್ಲ.

**ಎಲೆಕ್ಟಾನಿಕ್ಸ್ ವಸ್ತುಗಳ ನಿಷೇಧ :** ಡ್ರೆಸ್ ಕೋಡ್ ಜೊತೆಗೆ ಎಲೆಕ್ಟ್ರಾನಿಕ್ಸ್ ವಸ್ತುಗಳು, ಮೊಬೈಲ್, ಪೆನ್ ಡ್ರೈವ್, ಇಯರ್ ಫೋನ್, ಮೈಕ್ರೋಫೋನ್, ಬ್ಲೂಟೂಥ್, ಕೈ ಗಡಿಯಾರಗಳನ್ನು ಕೊಠಡಿಗೆ ತರುವಂತಿಲ್ಲ. ತಿನ್ನಬಹುದಾದ ವಸ್ತುಗಳನ್ನು ತರುವಂತಿಲ್ಲ, ಬಣ್ಣದ ಹಾಗೂ ಲೋಹದ ಕುಡಿಯುವ ನೀರಿನ ಬಾಟಲಿಗೂ ಅನುಮತಿ ಇಲ್ಲ, ಕೇಂದ್ರದಲ್ಲಿಯೇ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುತ್ತದೆ.

ಪೆನ್ಸಿಲ್, ಪೇಪರ್, ಎರೇಸರ್, ಜಾಮಿಟ್ರಿ ಬಾಕ್ಸ್, ಲಾಗ್ ಟೇಬಲ್ ಕೇಂದ್ರದೊಳಗೆ ತರುವಂತಿಲ್ಲ. ತಲೆಯ ಮೇಲೆ ಟೋಪಿ ಧರಿಸುವಂತಿಲ್ಲ ಹಾಗೂ ಮುಖ ಮುಚ್ಚುವಂತೆ ಮಾಸ್ಕ್ ಧರಿಸುವಂತಿಲ್ಲ.

**ಅನುಮತಿಸಲಾದ ವಸ್ತುಗಳು:** ಪರೀಕ್ಷಾ ಕೇಂದ್ರದೊಳಗೆ ಪ್ರವೇಶ ಪತ್ರವನ್ನು ಕಡ್ಡಾಯವಾಗಿ ತರಬೇಕು. ಸರ್ಕಾರದಿಂದ ಮಾನ್ಯವಾದ ಫೋಟೋ ಗುರುತಿನ ಚೀಟಿ ಕಡ್ಡಾಯವಾಗಿ ತರಬೇಕು. ಪರೀಕ್ಷಾ ಕೊನೆಯ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರಗೆ ಹೋಗಲು ಅನುಮತಿ ಇರುವುದಿಲ್ಲ.

ಪರೀಕ್ಷಾ ಕೇಂದ್ರ ಪ್ರವೇಶ ಅವಧಿ: ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದೊಳಗೆ ಕನಿಷ್ಠ ಮೊದಲ ಬೆಲ್ ಆಗುವ 2 ಗಂಟೆ ಮುಂಚಿತವಾಗಿ ಹಾಜರಿರಬೇಕು. ಕೇಂದ್ರದಲ್ಲಿ ಕೊಠಡಿ ಪ್ರವೇಶಕ್ಕೂ ಮುನ್ನ ಅಭ್ಯರ್ಥಿಗಳ ಮುಖವನ್ನಾಧರಿಸಿ ಆಫ್ ಮೂಲಕ ಗುರುತು ಪತ್ತೆ ಮಾಡುವ ಕಾರ್ಯ ನಡೆಯಲಿದೆ. ಮತ್ತು ಎಲ್ಲಾ ಅಭ್ಯರ್ಥಿಗಳ ಸಂಪೂರ್ಣ ತಪಾಸಣೆ ನಡೆಯುವುದರಿಂದ ಮೊದಲ ಬೆಲ್ ಆಗುವ ಮುನ್ನ 2 ಗಂಟೆಗಳ ಕಾಲ ಮುಂಚಿತವಾಗಿ ಕೇಂದ್ರದಲ್ಲಿರಬೇಕು. ಬೆಳಗ್ಗೆ 10.20 ಕ್ಕೆ ಮತ್ತು ಮಧ್ಯಾಹ್ನ 2.20 ಕ್ಕೆ ಮೊದಲ ಬೆಲ್ ಆಗಲಿದೆ.

ಪರೀಕ್ಷೆಯನ್ನು ಅತ್ಯಂತ ಪಾರದರ್ಶಕವಾಗಿ ನಡೆಸಲು ಎಲ್ಲಾ ಕೇಂದ್ರಗಳ ಪ್ರಾಂಶುಪಾಲರು ಪರೀಕ್ಷಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು, ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯುವ ಅಭ್ಯರ್ಥಿಗಳಿಗೆ ಅಗತ್ಯ ಮೂಲಭೂತ ಸೌಕರ್ಯ ಸಮರ್ಪಕವಾಗಿ ದೊರೆಯಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ತಿಳಿಸಿದ್ದಾರೆ.

## ಕ್ರೀಡೆಯಿಂದ ಮನಸ್ಸಿಗೆ ಉಲ್ಲಾಸ: ಸಚಿವ

» **ಚಿತ್ರದುರ್ಗ**

ಕ್ರೀಡೆಯಿಂದ ಮನಸ್ಸಿಗೆ ಉಲ್ಲಾಸ ದೊರೆಯಲಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ನಗರದವೀರವನಿತೆಒನಕೆಓಬವ್ವ ಕ್ರೀಡಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ವತಿಯಿಂದ ಆಯೋಜಿಸಲಾದ ಜಿಲ್ಲಾ ಮಟ್ಟದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕ್ರೀಡೆ ಜೀವನದಲ್ಲಿ ಬಹಳ ಮುಖ್ಯ ಪಾತ್ರ ವಹಿಸಲಿದೆ. ಎಲ್ಲಿ ಕ್ರೀಡೆ ಇದೆಯೋ ಅಲ್ಲಿ ಆರೋಗ್ಯವೂ ಇದೆ.

ಸರ್ಕಾರಿ ನೌಕರರು ತಮ್ಮ ದೈನಂದಿನ ಒತ್ತಡದ ಕೆಲಸದ ಮಧ್ಯೆಯೂ ಸಹ ಕ್ರೀಡೆಯಲ್ಲಿ ಭಾಗವಹಿಸಿರುವುದು ತುಂಬಾ ಸಂತೋಷದ ವಿಚಾರ. ಕ್ರೀಡೆಯಲ್ಲಿ ಸೋಲು–ಗೆಲವು ಸಹಜ. ಇದಕ್ಕಿಂತ ಮುಖ್ಯವಾಗಿ ಕ್ರೀಡೆಯಲ್ಲಿ ಪಾಲ್ಗೊಳ್ಳುವುದು ಬಹಳ ಮುಖ್ಯ ಎಂದ ಸಚಿವರು, ಜಿಲ್ಲೆಯ ಎಲ್ಲ ಸರ್ಕಾರಿ ನೌಕರರು ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎರಡು ದಿನಗಳ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಳ್ಳುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಾಲತೇಶ್ ಮುದಜ್ಜಿ ಸೇರಿದಂತೆ ಮತ್ತಿತರರು ಇದ್ದರು.

ಇದೇ ವೇಳೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಖುದ್ದು, ಶಾಟ್ ಪುಟ್ ಎಸೆತದಲ್ಲಿ ಪಾಲ್ಗೊಂಡು, ಸರ್ಕಾರಿ ನೌಕರರನ್ನು ಹುರಿದುಂಬಿಸಿದರು.



## ಪ್ರಮುಖ ಸುದ್ದಿ

**ಚಳ್ಳಕೆರೆ ಗೃಹಾಧಾರಿತ ಶಿಕ್ಷಣ ಕೇಂದ್ರಕ್ಕೆ ವೈಯಕ್ತಿಕವಾಗಿ ಸಾಮಾಗ್ರಿ ವಿತರಿಸಿದ ಜಿ.ಪಂ ಸಿಇಒ ಎಸ್.ಜೆ. ಸೋಮಶೇಖರ್**

# ವಿಶೇಷ ಮಕ್ಕಳ ಗೃಹಾಧಾರಿತ ಶಿಕ್ಷಣಕ್ಕೆ ಆಸರೆ

» **ಚಿತ್ರದುರ್ಗ**

ಚಳ್ಳಕೆರೆಯ ಗೃಹಾಧಾರಿತ ಶಿಕ್ಷಣ ಕೇಂದ್ರಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ. ಸೋಮಶೇಖರ್ ಅವರು ತಮ್ಮ ದುಡಿಮೆಯ ಉಳಿತಾಯದ ವೈಯಕ್ತಿಕ ಹಣದಿಂದ ಸುಮಾರು ಒಂದೂವರೆ ಲಕ್ಷ ರೂ. ಗೂ ಹೆಚ್ಚು ಮೊತ್ತದ ಸಾಮಾಗ್ರಿಯನ್ನು ಖರೀದಿಸಿ ಒದಗಿಸಿದ್ದು, ವಿಶೇಷ ಅಗತ್ಯವುಳ್ಳ ಮಕ್ಕಳು ಕೂಡ ಮುಖ್ಯ ವಾಹಿನಿಗೆ ಬರುವಂತಾಗಲು ಶ್ರಮ ವಹಿಸುವ ಮೂಲಕ, ಇಂತಹ ಮಕ್ಕಳಿಗೆ ಆಸರೆಯಾಗಿದ್ದಾರೆ.




ಕಿವುಡ ಹಾಗೂ ಮೂಕ ಮಕ್ಕಳು, ಮಾನಸಿಕ ಆರೋಗ್ಯ ವೈಕಲ್ಯ ಹೊಂದಿರುವಂತಹ ಮಕ್ಕಳು ಸೇರಿದಂತೆ ಶಾಲೆಗೆ ಹಾಜರಾಗಲು ಸಾಧ್ಯವಾಗದ ವಿವಿಧ ಬಗೆಯ (ತೀವ್ರ ನ್ಯೂನ್ಯತೆಯುಳ್ಳ) ಮಕ್ಕಳಿಗೆ ಮನೆಯಲ್ಲಿಯೇ ತಮಗೆ ಅವಶ್ಯಕತೆಯಿರುವ ದೈನಂದಿನ ಕೌಶಲ್ಯಗಳ ತರಬೇತಿ ಹಾಗೂ ಫೀಜಿಯೋಥೆರಪಿ ಸೇವೆಯನ್ನು ಒದಗಿಸಿ ಸಮಾಜದ ಮುಖ್ಯವಾಹಿನಿಗೆ ತರುವುದೇ ಗೃಹಾಧಾರಿತ ಶಿಕ್ಷಣವಾಗಿದೆ. ಇಂತಹ ಮಕ್ಕಳ ಶಿಕ್ಷಣಕ್ಕಾಗಿ ಅಗತ್ಯವಿರುವ ಕಲಿಕಾ ಸಾಮಗ್ರಿಗಳನ್ನು ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಶೋಧನಾ ಸಂಸ್ಥೆ ಶಿಫಾರಸ್ಸು ಮಾಡಿದ್ದು, ಈ ರೀತಿ ಶಿಫಾರಸು ಮಾಡಿರುವಂತಹ ಸಾಮಗ್ರಿಗಳನ್ನು ಜಿ.ಪಂ. ಸಿಇಓ ಸೋಮಶೇಖರ್ ಅವರು ತಮ್ಮ ದುಡಿಮೆಯಲ್ಲಿ ಉಳಿತಾಯ ಮಾಡಿರುವ ವೈಯಕ್ತಿಕ ಹಣದಿಂದ ಒಂದೂವರೆ ಲಕ್ಷ ರೂ. ಗೂ ಹೆಚ್ಚು ಮೊತ್ತದ ಕಲಿಕಾ ಸಾಮಗ್ರಿಗಳನ್ನು ಖರೀದಿಸಿ, ಚಳ್ಳಕೆರೆಯ ಗೃಹಾಧಾರಿತ ಶಿಕ್ಷಣ ಕೇಂದ್ರಕ್ಕೆ ಪೂರೈಕೆ ಮಾಡಿಸಿದ್ದಾರೆ. ಶೀಘ್ರದಲ್ಲಿಯೇ ಈ ಕೇಂದ್ರವನ್ನು ಚಳ್ಳಕೆರೆ ಶಾಸಕರಿಂದ ಉದ್ಘಾಟನೆ ಮಾಡಿಸಲಾಗುವುದು ಎಂದು ತಿಳಿಸಿದ್ದಾರೆ.

ಗೃಹಾಧಾರಿತ ಶಿಕ್ಷಣ ಕೇಂದ್ರದಲ್ಲಿ ದಾಖಲಾಗಿರುವ ವಿಶೇಷ ಅಗತ್ಯವುಳ್ಳ ಮಕ್ಕಳಿಗೆ ಫಿಜಿಯೋಥೆರಪಿ ಮತ್ತು ದೈನಂದಿನ ಕೌಶಲ್ಯಗಳನ್ನು ಅಭ್ಯಾಸ ಮಾಡಿಸಿ ಈ ಮಕ್ಕಳನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಎಲ್ಲಾ ತಾಲ್ಲೂಕು ಕೇಂದ್ರದಲ್ಲಿ ಸಮನ್ವಯ ಶಿಕ್ಷಣ ಸಂಪನ್ಮೂಲ ಕೇಂದ್ರಗಳನ್ನು ಸಮನ್ವಯ ಶಿಕ್ಷಣ ಯೋಜನೆಯಡಿ ಪ್ರಾರಂಭಿಸಿದ್ದು, ಇಂತಹ ಮಕ್ಕಳಿಗೆ ಸರ್ಕಾರದಿಂದ ತಲಾ ಎರಡು ಲಕ್ಷದಂತೆ ಅನುದಾನ ನೀಡಲಾಗುತ್ತಿದೆ.

ತಾಲ್ಲೂಕುಗಳಿಗೆ ಅನುದಾನ ಮಂಜೂರಾತಿಗೆ ಜಿ.ಪಂ ಸಿಇಓ ಅವರ ಅನುಮೋದನೆಗೆ ಬಂದಂತಹ ಸಂದರ್ಭದಲ್ಲಿ, ಇದರ ಸತ್ಯಾಸತ್ಯತೆಯನ್ನು ಪರಿಶೀಲಿಸಲು ಚಿತ್ರದುರ್ಗ ತಾಲ್ಲೂಕು ಸಮನ್ವಯ ಶಿಕ್ಷಣ ಕೇಂದ್ರಕ್ಕೆ ಜಿ.ಪಂ ಸಿಇಓ ಸೋಮಶೇಖರ್ ಅವರು ಖುದ್ದು ಭೇಟಿ ನೀಡಿ, ಅಲ್ಲಿರುವ ಕಲಿಕೋಪಕರಣ, ಫಿಜಿಯೋಥೆರಪಿ, ಸ್ಯಾಂಡ್‌ಥೆರಪಿ ಹಾಗೂ ಮಕ್ಕಳಿಗೆ ವ್ಯಾಯಾಮ ಮಾಡಿಸಲು ಅನುಕೂಲವಾಗುವಂತಹ ಉಪಕರಣಗಳು ಮತ್ತು ಮಕ್ಕಳನ್ನು ಒಂದು ಕಡೆ ಕೂತು ಕಲಿಯುವ ಕಲಿಕೋಪಕರಣ ಬಳಕೆಯ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಂಡಿದ್ದರು.

ಗೃಹಾಧಾರಿತ ಶಿಕ್ಷಣ ಪಡೆಯುತ್ತಿರುವ ಮಕ್ಕಳ ಮನೆಗಳಿಗೆ ಭೇಟಿ ನೀಡಿ, ಫಲಾನುಭವಿಗಳ ಅಭಿಪ್ರಾಯ ಪಡೆದ ನಂತರ, ಇದರಿಂದ ಪ್ರೇರಿತರಾದ ಜಿ.ಪಂ ಸಿಇಓ ಎಸ್.ಜೆ. ಸೋಮಶೇಖರ್ ಅವರು ಇನ್ನು ಯಾವ ಯಾವ ತಾಲ್ಲೂಕುಗಳಿಗೆ ಈ ರೀತಿಯ ಕಲಿಕಾ ಸಾಮಗ್ರಿಗಳು ಬೇಕಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಡಿಡಿಪಿಐ ಮತ್ತು ಡಿವೈಪಿಸಿ ಅವರಿಂದ ಸಮಗ್ರ ಮಾಹಿತಿ ಪಡೆದರು. ಚಳ್ಳಕೆರೆ ತಾಲ್ಲೂಕಿನ 49 ಮಕ್ಕಳಿಗೆ ಸಮನ್ವಯ ಶಿಕ್ಷಣ ನೀಡಲಾಗುತ್ತಿದ್ದು, ಈ ಕೇಂದ್ರಕ್ಕೆ ಕಲಿಕೋಪಕರಣ ಮತ್ತು ಫಿಜಿಯೋಥೆರಪಿ ಒಟ್ಟು 56 ಸಾಮಗ್ರಿಗಳು ಈ ತಾಲ್ಲೂಕಿಗೆ ಅವಶ್ಯಕತೆ ಇದೆ ಎಂದು ತಿಳಿಸಿದಾಗ ಕೂಡಲೇ ಜಿ.ಪಂ ಸಿಇಓ ಅವರು ನನ್ನ ಸ್ವಂತ ಖರ್ಚಿನಲ್ಲಿ ಚಳ್ಳಕೆರೆ ಗೃಹಧಾರಿತ ಶಿಕ್ಷಣ ಕೇಂದ್ರಕ್ಕೆ ಸಾಮಗ್ರಿಗಳನ್ನು ಖರೀದಿಸಿ ಕೊಡಿಸುವುದಾಗಿ ತಿಳಿಸಿ, ಕೂಡಲೆ ಇವುಗಳನ್ನು ತರಿಸಲು ಡಿಡಿಪಿಐ ಅವರಿಗೆ ಸೂಚನೆ ನೀಡಿದ್ದರು. ಅದರಂತೆ ಕಳೆದ ಮಾರ್ಚ್ 07 ರಂದು ಚಳ್ಳಕೆರೆಯ ಗೃಹಾಧಾರಿತ ಶಿಕ್ಷಣ ಕೇಂದ್ರಕ್ಕೆ ಸುಮಾರು 56 ಬಗೆಯ ಸಾಮಗ್ರಿಗಳನ್ನು ಜಿ.ಪಂ ಸಿಇಓ ತಮ್ಮ ಸ್ವಂತ ಖರ್ಚಿನಲ್ಲಿ ಖರೀದಿಸಿ ಈ ಕೇಂದ್ರಕ್ಕೆ ನೀಡಿದ್ದಾರೆ.

ಮಕ್ಕಳ ಬಳಕೆಗೆ ಮತ್ತು ಕಲಿಕೆಗೆ ಈ ಕೇಂದ್ರದಲ್ಲಿರುವ ಸೌಲಭ್ಯಗಳು ಮತ್ತು ಮಗುವಿನ ವಿಕಲತೆಯ ಪ್ರಮಾಣ ಕಡಿಮೆಯಾಗಿ ಜೀವನ ಕೌಶಲ್ಯಗಳು ಸುಧಾರಣೆಯಾಗಬೇಕು, ಅವರನ್ನು ಮುಖ್ಯ ವಾಹಿನಿಗೆ ತರಲು ಇಲ್ಲಿನ ಶಿಕ್ಷಕರು ಶ್ರಮಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಏ.16ರಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಹಿರಿಯೂರು ಉಪವಿಭಾಗದ ವ್ಯಾಪ್ತಿಯ ವಿವಿಧೆಡೆ ಇದೇ ಏಪ್ರಿಲ್ 16ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಹಿರಿಯೂರು ನಗರಸಭೆ ಪೌರಯುಕ್ತರ ಕೋರಿಕೆಯಂತೆ ಹಿರಿಯೂರು ಪಟ್ಟಣದಲ್ಲಿ ಟಿ.ಬಿ.ಸರ್ಕಲ್‌ನಿಂದ ತಾಲ್ಲೂಕು ಕಛೇರಿವರೆಗಿನ ರಸ್ತೆ ಅಗಲೀಕರಣ ಕಾಮಗಾರಿ ಪ್ರಗತಿಯಲ್ಲಿರುವುದರಿಂದ ಇದೇ ಏಪ್ರಿಲ್ 16ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ಹಿರಿಯೂರು ಪಟ್ಟಣದ ಪ್ರದೇಶಗಳಲ್ಲಿ ಹಾಗೂ ತಾಲ್ಲೂಕಿನ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜು ಇರುವುದಿಲ್ಲ. ಹಿರಿಯೂರು ಪಟ್ಟಣದ ಆವಧಾನಿನಗರ, ತಾಲ್ಲೂಕು ಕಛೇರಿ ಹಾಗೂ ಸುತ್ತಮುತ್ತ, ಆಜಾದ್‌ನಗರ, ಚಿಕ್ಕಪೇಟೆ,ತೇರುಮಲ್ಲೇಶ್ವರದೇವಸ್ಥಾನದಸುತ್ತಮುತ್ತ ಗಾಂಧಿವೃತ್ತ ಹುಳಿಯೂರು ರಸ್ತೆಯ ಹರಿಶ್ಚಂದ್ರ ಘಾಟ್ ಸುತ್ತಮುತ್ತ, ಲಕ್ಕವ್ವನಹಳ್ಳಿ, ದೊಡ್ಡಘಟ್ಟ, ಸೀಗೇಹಟ್ಟಿ, ಕೂನಿಕೆರೆ ಹಾಗು ಸುತ್ತ ಮುತ್ತಲಿನ ಗ್ರಾಮದ ಗ್ರಾಹಕರು, ರೈತರು, ಸಾರ್ವಜನಿಕರು ಸಹಕರಿಸಬೇಕು ಎಂದು ಹಿರಿಯೂರು ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಹೆಚ್.ಪೀರ್‌ಸಾಬ್ ಕೋರಿದ್ದಾರೆ.

### ಶಿಕ್ಷಣದಲ್ಲಿ ರಂಗಕಲೆ ಕಾರ್ಯಾಗಾರ

» ಚಿತ್ರದುರ್ಗ

ನಗರದ ಕೋಟೆರಸ್ತೆಯಲ್ಲಿರುವ ಶ್ರೀ ರಾಘವೇಂದ್ರ ಶಿಕ್ಷಣ ಮಹಾವಿದ್ಯಾಲಯದ ಆವರಣದಲ್ಲಿ ರಂಗಸೌರಭ ಕಲಾ ಸಂಘ, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಬೆಂಗಳೂರು ಸಂಯುಕ್ತ ಆಶ್ರಯದಲ್ಲಿ ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗಾಗಿ ಶಿಕ್ಷಣದಲ್ಲಿ ರಂಗಕಲೆ (ಆಂಗಿಕ, ವಾಚಿಕ, ಆಹಾರ್ಯ, ಸಾತ್ವಿಕ ಅಭಿನಯ ಹಾಗೂ ನವರಸ) ರಂಗಭೂಮಿ ಕಾರ್ಯಾಗಾರದ ಕಾರ್ಯಕ್ರಮವನ್ನು 16 ರಂದು ಬೆಳಿಗ್ಗೆ 10.30ಕ್ಕೆ ಏರ್ಪಡಿಸಲಾಗಿದೆ. ಆಹಾರ ನಾಗರಿಕ ಸರಬರಾಜು ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ರಾಘವೇಂದ್ರ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎ.ಜಿ.ಬಸವರಾಜಪ್ಪ ಅಧ್ಯಕ್ಷತೆ ವಹಿಸುವರು. ರಂಗವಿಮರ್ಶಕ ಹಾಗೂ ನಿವೃತ್ತ ಪ್ರಾಚಾರ್ಯ ಡಾ.ವಿ.ಬಸವರಾಜ್ ಪ್ರಶಿಕ್ಷಣಾರ್ಥಿಗಳಿಗೆ ರಂಗಭೂಮಿ ಅವಶ್ಯಕತೆ ಕುರಿತು ಉಪನ್ಯಾಸ ನೀಡಲಿದ್ದಾರೆ.ಉಪನ್ಯಾಸಕರಾದ ಡಾ.ಕೆ. ಮೋಹನ್‌ಕುಮಾರ್, ಬಿ.ಎಸ್.ನಟರಾಜ್, ಸುದರ್ಶನ್ ಹಾಗೂ ಎಮ್.ಸ್ವಾತಿ, ಯೋಗಶಿಕ್ಷಕ ಎಂ.ಬಿ.ಮುರುಳಿ ಮುಂತಾದವರು ಮುಖ್ಯಅತಿಥಿಯಾಗಿ ಉಪಸ್ಥಿತರಿರುವರು. ರಂಗ ಕಾರ್ಯಾಗಾರ ಸಂಪನ್ಮೂಲ ವ್ಯಕ್ತಿಯಾಗಿ ರಂಗ ನಿರ್ದೇಶಕ ಕೆ.ಪಿ.ಎಂ.ಗಣೇಶಯ್ಯ ದ್ವಿತೀಯ ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ಪಠ್ಯಾಧಾರಿತ ಪ್ರಾಯೋಗಿಕ ರಂಗ ತರಬೇತಿ ನೀಡಲಿದ್ದಾರೆ ಎಂದು ರಂಗಸೌರಭ ಕಲಾ ಸಂಘದ ನಿರ್ದೇಶಕ ಪಿ.ಎನ್. ಗಿರೀಶ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ, ಬಿಳಿ ಜೋಳ ಖರೀದಿ

» ದಾವಣಗೆರೆ

ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಮೂಲಕ ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನಲ್ಲಿ



ಭತ್ತ ಹಾಗೂ ಬಿಳಿ ಜೋಳವನ್ನು ರೈತರಿಂದ ಖರೀದಿಸಲು ಅವಕಾಶ ಕಲ್ಪಿಸಿದೆ.ಅದರಂತೆಜಿಲ್ಲಾ ವ್ಯಾಪ್ತಿಯಲ್ಲಿನ ಬಿತ್ತನೆ ಪ್ರಮಾಣ ಆಧರಿಸಿ ಭತ್ತ ಕ್ವಿಂಟಾಲ್‌ಗೆ ರೂ.2300 ಹಾಗೂ ಭತ್ತ ಗ್ರೇಡ್‌ಎ ರೂ.2320 ಗಳಂತೆ ಮತ್ತು ಹೈಬ್ರಿಡ್ ಜೋಳವನ್ನು ಪ್ರತಿ ಕ್ವಿಂಟಾಲ್‌ಗೆ ರೂ.3371/– ಹಾಗೂ ಮಾಲ್ದಂಡಿ ಜೋಳವನ್ನು ಕ್ವಿಂಟಾಲ್‌ಗೆ ರೂ. 3421/– ನಂತೆ ಯಾವುದೇ ವ್ಯತ್ಯಾಸಗಳಿಗೆ ಅವಕಾಶ ನೀಡದೆ ನೊಂದಣಿ ಮತ್ತು ಖರೀದಿಗೆ ಕ್ರಮವಹಿಸಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದರು. ಪ್ರಸಕ್ತ ಸಾಲಿನ ಹಿಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ ಮತ್ತು ಬಿಳಿಜೋಳ ಖರೀದಿಸಲು ಮಾರ್ಚ್ 15 ರಿಂದ ನೊಂದಣಿ ಪ್ರಕ್ರಿಯ ಪ್ರಾರಂಭಿಸಲಾಗಿದ್ದು, ಮೇ 31 ರವರೆಗೆ ನೊಂದಣಿ ಮತ್ತು ಖರೀದಿ ಪ್ರಕ್ರಿಯೆ ನಡೆಯಲಿದೆ. ಖರೀದಿ ಕೇಂದ್ರಗಳನ್ನು ಎಲ್ಲಾ ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ಆರಂಭಿಸಲಾಗಿದೆ. ರೈತರಿಂದ ಸಂಪೂರ್ಣ ಒಣಗಿದ ಹಾಗೂ ಎಫ್‌ಎಕ್ಯೂ ಗುಣಮಟ್ಟದ ಭತ್ತ ಮತ್ತು ಬಿಳಿಜೋಳ ಮಾದರಿಯನ್ನು ಪಡೆದು ನಿಗಧಿಪಡಿಸಿದ ಮಾನದಂಡಗಳಂತೆ ಗ್ರೇಡರ್ ಅಥವಾ ಆಸೇಯರ್‌ಗಳಿಂದ ದೃಢೀಕರಿಸಿದ ಗುಣಮಟ್ಟದ ಬಿಳಿ ಜೋಳವನ್ನು ಮಾತ್ರ ಖರೀದಿಸಲಾಗುತ್ತದೆ. ರೈತರ ಫ್ರೂಟ್ಸ್ ಐಡಿ ನೊಂದಣಿ ಕಡ್ಡಾಯವಾಗಿರುತ್ತದೆ. ರೈತರಿಂದ ಕನಿಷ್ಠ ಬೆಂಬಲ ಬೆಲೆಗೆ ಜೋಳ ಖರೀದಿಸಲಾಗುವುದು. ಪ್ರತಿ ರೈತರಿಂದ ಎಕರೆಗೆ 20 ಕ್ವಿಂಟಾಲ್‌ನಂತೆ ಗರಿಷ್ಠ 150 ಕ್ವಿಂಟಾಲ್ ಜೋಳ ಹಾಗೂ ಭತ್ತವನ್ನು ಎಕರೆಗೆ ಕನಿಷ್ಠ 25 ರಿಂದ ಗರಿಷ್ಠ 50 ಕ್ವಿಂಟಾಲ್‌ವರೆಗೆ ಖರೀದಿಸಲಾಗುವುದು. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಸಿದ್ದರಾಮ ಮರಿಹಾಳ್, ಆಹಾರ ನಿಗಮದ ಅಧಿಕಾರಿ ಶೃತಿ ಹಾಗೂ ಎಪಿಎಂಸಿ ಅಧಿಕಾರಿಗಳು ಉಪಸ್ಥಿತರಿದ್ದರು.

ನೌಕರರ ಕ್ರೀಡಾ ಕೂಟಕ್ಕೆ ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಚಾಲನೆ

# ಸರ್ಕಾರ ಮಟ್ಟದಲ್ಲಿ ಹಳೆ ಪಿಂಚಣಿ ವ್ಯವಸ್ಥೆ ಜಾರಿಗೆ ಪರಿಶೀಲನೆ: ಶಾಸಕ ಕೆ.ಸಿ.ವಿರೇಂದ್ರ

▪ ಚಿತ್ರದುರ್ಗ



ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ನಡುವೆಯೂ ಸರ್ಕಾರಿ ನೌಕರರ 7ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿ ಮಾಡಿದೆ. ಸರ್ಕಾರದ ಮಟ್ಟದಲ್ಲಿ ಹೊಸ ಪಿಂಚಣಿ ಯೋಜನೆ ಬದಲು ಹಳೆ ಪಿಂಚಣಿ ವ್ಯವಸ್ಥೆಯನ್ನು ಮರು ಜಾರಿಗೊಳಿಸುವ ಸಾಧ್ಯತೆಯನ್ನು ಪರಿಶೀಲಿಸಲಾಗುತ್ತಿದೆ ಎಂದು ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಹೇಳಿದರು.

ನಗರದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ವತಿಯಿಂದ ಆಯೋಜಿಸಲಾದ ಜಿಲ್ಲಾ ಮಟ್ಟದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.ರಾಜ್ಯ ಸರ್ಕಾರ ನೌಕರರ ಹಿತ ಕಾಪಾಡುವಲ್ಲಿ ಬದ್ಧವಾಗಿದೆ. ನೌಕರರು ಉತ್ತಮವಾಗಿ ಕೆಲಸ ನಿರ್ವಹಿಸಿ ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸಬೇಕು. ಈ ಮೂಲಕ ಸರ್ಕಾರಕ್ಕೆ ಉತ್ತಮ ಹೆಸರು ತರಬೇಕು. ಪ್ರತಿನಿತ್ಯ ಸಾರ್ವಜನಿಕರ ಒಡನಾಟದಲ್ಲಿರುವ ಸರ್ಕಾರಿ ನೌಕರರು ಇಂತಹ ಕ್ರೀಡಾ ಕೂಟಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಮೇಲಾಧಿಕಾರಿಗಳು, ಸರ್ಕಾರ, ಜನಪ್ರನಿಧಿಗಳು ಹಾಗೂ ಸಾರ್ವಜನಿಕರು ನಿಮ್ಮಿಂದ ಹೆಚ್ಚಿನ ಕೆಲಸವನ್ನು ನಿರೀಕ್ಷಿಸುತ್ತಾರೆ. ನೀವು ದೈಹಿಕ ಹಾಗೂ ಮಾನಸಿಕವಾಗಿ ಸಧೃಡವಾಗಿದ್ದರೆ ಉತ್ಸಾಹದಿಂದ ಕೆಲಸ ಮಾಡಬಹುದು. ಕ್ರೀಡೆಗಳು ದೈಹಿಕ ಆರೋಗ್ಯ ಕಾಪಾಡುವಲ್ಲಿ ಸಹಕಾರಿಯಾಗಿವೆ ಎಂದರು.

ನಗರದಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಇಂಬು ನೀಡುವ ನಿಟ್ಟಿನಲ್ಲಿ ಜಿಲ್ಲಾ ಕ್ರೀಡಾಂಗಣವನ್ನು ಅಭಿವೃದ್ಧಿ ಪಡಿಸಲಾಗಿದೆ. ಹೊಸ ಟ್ರಾಕ್ ಹಾಗೂ ಈಜುಕೊಳ ನವೀಕರಣ ಮಾಡಲಾಗಿದೆ. ವಾಲ್ ಕ್ಲೈಬಿಂಗ್ ನಿರ್ಮಾಣದ ಟೆಂಡರ್ ಕರೆಯಲಾಗಿದೆ. ಫುಟ್ಬಾಲ್ ಮೈದಾನ ನಿರ್ಮಿಸುವ ಕಾರ್ಯವು ಪ್ರಗತಿಯಲ್ಲಿದೆ ಎಂದು ತಿಳಿಸಿದರು.ಕ್ರೀಡಾ ಸಚಿವರು ಹಾಗೂ ಉಸ್ತುವಾರಿ ಸಚಿವರು ಕ್ರೀಡಾಂಗಣ ಅಭಿವೃದ್ಧಿಗೆ ತಲಾ ರೂ.1 ಕೋಟಿ ಅನುದಾನ ನೀಡಿದ್ದಾರೆ. ಇದರೊಂದಿಗೆ ಕ್ರೀಡಾಂಗಣದ ಸರ್ವತೋಮುಖ ಅಭಿವೃದ್ಧಿ ಇನ್ನು ಹೆಚ್ಚಿನ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ನೀಡಲಾಗುವುದು. ಕ್ರೀಡೆಗೆ ಹೆಚ್ಚಿನ ಮಹತ್ವ ನೀಡಲಾಗಿದ್ದು, ಸರ್ಕಾರಿ ನೌಕರರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಸರ್ಕಾರಿ ನೌಕರರು ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಪಾಲ್ಗೊಂಡು ಚಿತ್ರದುರ್ಗ ಜಿಲ್ಲೆಗೆ ಕೀರ್ತಿ ತರುವಲ್ಲಿ ಪ್ರಯತ್ನಿಸಬೇಕು ಎಂದು ಹೇಳಿದರು.

ಕ್ರೀಡಾಜ್ಯೋತಿ ಸ್ವೀಕರಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ್, ಸರ್ಕಾರಿ ನೌಕರರು ಅತ್ಯಂತ ಒತ್ತಡದಲ್ಲಿ ಬದುಕು ನಡೆಸುತ್ತಿದ್ದಾರೆ. ಸಾರ್ವಜನಿಕರು, ಮೇಲಾಧಿಕಾರಿಗಳು, ಜನಪ್ರತಿನಿಧಿಗಳ ಒತ್ತಡಗಳ ನಡುವೆ ಸಂಸಾರವನ್ನು ಸಹ ನಿಭಾಯಿಸುವ ಜವಾಬ್ದಾರಿ ಸರ್ಕಾರಿ ನೌಕರರ ಮೇಲಿದೆ. ಸರ್ಕಾರಿ ನೌಕರರಲ್ಲಿನ ಕ್ರೀಡೆ ಹಾಗೂ ಸಾಂಸ್ಕೃತಿಕ ಕೌಶಲ್ಯಗಳನ್ನು ಪ್ರದರ್ಶಿಸಲು ಸರ್ಕಾರಿ ನೌಕರರ ಕ್ರೀಡಾ ಕೂಟ ಸಹಕಾರಿಯಾಗಿದೆ ಎಂದರು.

ಇದರಲ್ಲಿ ಪಾಲ್ಗೊಳ್ಳುವುದರಿಂದ ಮನೋಲ್ಲಾಸ, ಮನೋಸ್ಥೈರ್ಯ, ದೈಹಿಕ ಶಕ್ತಿ ಸಹ ನೌಕರರಲ್ಲಿ ವೃದ್ಧಿಯಾಗುತ್ತದೆ, ಅಲ್ಲದೆ ಕೆಲಸ ನಿರ್ವಹಿಸಲು ಹೆಚ್ಚಿನ ಸ್ಪೂರ್ತಿ ದೊರಕಲಿದೆ. ಚಿತ್ರದುರ್ಗ ಜಿಲ್ಲೆ ಮೊದಲಿನಿಂದಲೂ ಕ್ರೀಡೆಗೆ ಹೆಸರು ವಾಸಿಯಾಗಿದೆ.ಚಿತ್ರದುರ್ಗ ಪಾಳೇಗಾರರಲ್ಲಿ ವಂಶಪಾರಂಪರ್ಯ ರಾಜಕಾರಣದ ಬದಲಿಗೆ, ಕ್ರೀಡೆ ಹಾಗೂ ಶೌರ್ಯದಲ್ಲಿ ಉತ್ತಮ ಸಾಧನೆ ತೋರಿದವರನ್ನು ಪಾಳೇಗಾರನನ್ನಾಗಿ ಆಯ್ಕೆ ಮಾಡುವ ಪದ್ಧತಿ ಇತ್ತು. ಇಂತಹ ಜಿಲ್ಲೆಯಲ್ಲಿ ನೀವೆಲ್ಲರೂ ಸರ್ಕಾರಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವುದು ಪುಣ್ಯದ ವಿಷಯವಾಗಿದೆ. ಕರ್ತವ್ಯವನ್ನು ಜನರ ಸೇವೆಗಾಗಿ ಮುಡುಪಾಗಿರಿಸಿ ಉತ್ತಮ ಅಧಿಕಾರಿ ಹಾಗೂ ನೌಕರರು ಎಂದು ಹೆಸರು ಗಳಿಸುವಂತೆ ತಿಳಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಮಾತನಾಡಿ, ರಾಜ್ಯ ಸರ್ಕಾರ ಖಾಲಿ ಇರುವ 2.5 ಲಕ್ಷ ಹುದ್ದೆಗಳನ್ನು ಭರ್ತಿ ಮಾಡಿದರೆ, ನೌಕರರ ಮೇಲಿನ ಕೆಲಸದ ಒತ್ತಡ ಕಡಿಮೆಯಾಗಲಿದೆ. ನೌಕರರು ತಮ್ಮ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಗಮನ ಹರಿಸಬೇಕು ಎಂದರು. ಕಾರ್ಯಕ್ರಮದಲ್ಲಿ ರಾಷ್ಟ್ರ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿದ ಜಿಲ್ಲೆಯ ನೌಕರ ಕ್ರೀಡಾಪಟುಗಳಿಗೆ ಸನ್ಮಾನಿಸಲಾಯಿತು. ಜಿಲ್ಲಾಧ್ಯಕ್ಷ ಮಾಲತೇಶ್ ಮುದಜ್ಜಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಉಪಾಧ್ಯಕ್ಷ ಡಿ.ಎನ್. ಮೈಲಾರಪ್ಪ,ಜಿಲ್ಲಾಪೊಲೀಸ್‌ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಉಪವಿಭಾಗಾಧಿಕಾರಿ ಮಹಿಬೂಬ್ ಜಿಲಾನಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತಾ ಎಂ.ನೆಲವಗಿ ಸೇರಿದಂತೆ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ವಿವಿಧ ಪದಾಧಿಕಾರಿಗಳು ಭಾಗವಹಿಸಿದ್ದರು.

### 21 ರಂದು ಆರೋಗ್ಯ ಸಂಜೀವಿನ ಯೋಜನೆ ಜಾರಿ

ಬರುವ ಏಪ್ರಿಲ್ 21 ಸರ್ಕಾರಿ ನೌಕರರ ದಿನಾಚರಣೆಯಂದು ರಾಜ್ಯ ಸರ್ಕಾರ ಆರೋಗ್ಯ ಸಂಜೀವಿನಿ ಯೋಜನೆ ಜಾರಿ ಮಾಡಲಿದೆ. ಈಗಾಗಲೇ ಮುಖ್ಯಮಂತ್ರಿಗಳು ಯೋಜನೆ ಜಾರಿ ಆದೇಶ ಹೊರಡಿಸಿದ್ದಾರೆ. ಆರೋಗ್ಯ ಸಂಜೀವಿನಿ ಯೋಜನೆಯಿಂದ ಸರ್ಕಾರಿ ನೌಕರರರು ಹಾಗೂ ಅವರ ಅವಲಂಬಿತರಿಗೆ ನಗದು ರಹಿತ ಉಚಿತ ಆರೋಗ್ಯ ಸೇವೆ ದೊರಕಲಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಹೇಳಿದರು. ಕ್ರೀಡಾಕೂಟದ ಉದ್ಘಾಟನೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ನಡುವೆಯೂ 7ನೇ ವೇತನ ಆಯೋಗ ಶಿಫಾರಸ್ಸನ್ನು ಜಾರಿ ಮಾಡಿದೆ. ಇದರೊಂದಿಗೆ ಆರೋಗ್ಯ ಸಂಜೀವಿನಿ ಯೋಜನೆಗೂ ಅನುಮತಿ ನೀಡಿದೆ. ಸರ್ಕಾರಿ ನೌಕರರಿಗೆ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಸ್ಯಾಲರಿ ಪ್ಯಾಕಜ್ ಅಕೌಂಟ್ ವ್ಯವಸ್ಥೆ ಜಾರಿಗೊಳಿಸಲಾಗಿದೆ. ಈ ಯೋಜನೆಯಲ್ಲಿ ಸರ್ಕಾರಿ ನೌಕರರು ಕೆಲಸದ ವೇಳೆ ಅಪಘಾತದಲ್ಲಿ ಮೃತಪಟ್ಟರೆ ರೂ.1 ಕೋಟಿ ಪರಿಹಾರ ನೀಡಲಾಗುವುದು. ಅಂಗವೈಕಲ್ಯತೆಗೆ ಒಳಗಾದರೆ ರೂ.35 ಲಕ್ಷದ ವರೆಗೆ ಪರಿಹಾರ ದೊರಕಲಿದೆ. ಕಡಿಮೆ ಬಡ್ಡಿ ದರದಲ್ಲಿ ವೈಯಕ್ತಿಕ, ಗೃಹ, ಹಾಗೂ ವಾಹನ ಸಾಲ ಸೌಲಭ್ಯ ನೀಡಲಾಗುವುದು. ಇದೇ ತಿಂಗಳ ಅಂತ್ಯಕ್ಕೆ ನಿವೃತ್ತ ಐ.ಎ.ಎಸ್ ಅಧಿಕಾರಿ ಪರ್ವೇಜ್ ಅವರ ನೇತೃತ್ವದ ಎನ್.ಪಿ.ಎಸ್ ಕಮಿಟಿ ತನ್ನ ವರದಿಯನ್ನು ಸರ್ಕಾರಕ್ಕೆ ನೀಡಲಿದೆ. ನಂತರ ಸರ್ಕಾರದ ಮನವೊಲಿಸಿ, ಎನ್.ಪಿ.ಎಸ್. ರದ್ದುಪಡಿಸಿ ಒಪಿಎಸ್ ಜಾರಿಗೊಳಿಸಲು ಪ್ರಯತ್ನಿಸುವುದಾಗಿ ಸಿ.ಎಸ್.ಷಡಾಕ್ಷರಿ ತಿಳಿಸಿದರು. ಮುಂಬರುವ ಮೇ ನಲ್ಲಿ ಶಿವಮೊಗ್ಗ ನಗರದಲ್ಲಿ ರಾಜ್ಯ ಮಟ್ಟದ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆ ಆಯೋಜಿಸಲಾಗುವುದು. ಸರ್ಕಾರಿ ನೌಕರರು ತಮ್ಮ ಆರೋಗ್ಯ ಕಾಪಾಡಿಕೊಳ್ಳುವ ಗಮನ ಹರಿಸಬೇಕು. ನೌಕರರು ಆತ್ಮ ವಂಚನೆ ಮಾಡಿಕೊಳ್ಳದೆ, ಕಚೇರಿ ಕೆಲಸಗಳನ್ನು ಶ್ರದ್ಧೆಯಿಂದ ನಿರ್ವಹಸುವಂತೆ ಸಿ.ಎಸ್.ಷಡಾಕ್ಷರಿ ಹೇಳಿದರು.

## ಶೋಷಿತರ ಪರ ನಿರಂತರ ಹೋರಾಟ ನಡೆಸಿದ ಮಹಾನೀಯರು ಅಂಬೇಡ್ಕರ್ ಮತ್ತು ಬಾಬುಜೀ

» ಚಳ್ಳಕೆರೆ

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಮತ್ತು ಹಸಿರುಕ್ರಾಂತಿಹರಿಕಾರ ಬಾಬುಜಗಜೀವನರಾಮ್‌ರವರು ಶೋಷಿತ ಸಮುದಾಯವೂ ಸೇರಿದಂತೆ ದೇಶದ ಬಡ ಜನರ ಪರವಾಗಿ ಹೋರಾಟ ನಡೆಸಿದ ಮಹಾನೀಯರು. ವಿಶೇಷವಾಗಿ ಶಿಕ್ಷಣವೂ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ನಿರ್ಲಕ್ಷಿತ ಸಮುದಾಯಕ್ಕೆ ಕಾಯಕಲ್ಪ ನೀಡಿದ ಕೀರ್ತಿ ಇಬ್ಬರೂ ಮಹಾನ್‌ನಾಯಕರದ್ದು ಎಂದು ಬಿಜೆಪಿ ಜಿಲ್ಲಾ ಎಸ್ಸಿ ಮೋರ್ಚಾ ಅಧ್ಯಕ್ಷ ಬಿ.ಶಿವಣ್ಣ ತಿಳಿಸಿದರು.





ಅವರು, ನಾಯಕನಹಟ್ಟಿ ಬಿಜೆಪಿ ಮಂಡಲ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಮತ್ತು ಬಾಬುಜಗಜೀವನರಾಮ್ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರತಿವರ್ಷವೂ ನಾವು ಅದ್ದೂರಿಯಾಗಿ ಇಬ್ಬರೂ ಮಹಾನ್‌ನಾಯಕರ ಜನ್ಮದಿನೋತ್ಸವವನ್ನು ಆಚರಣೆ ಮಾಡುತ್ತೇವೆ. ಆದರೆ, ಅವರ ತತ್ವ, ಸಿದ್ಧಾಂತಗಳ ಅವಳಡಿಕೆಗೆ ಪ್ರಾಮಾಣಿಕ ಯತ್ನ ನಡೆದಿಲ್ಲ. ಅಂಬೇಡ್ಕರ್ ಮತ್ತು ಬಾಬುಜಗಜೀವನರಾಮ್‌ರವರ ಮಹಾನ್‌ಕೊಡುಗೆಯನ್ನು ಈ ದೇಶ ಎಂದೂ ಮರೆಯದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಂಡಲಾಧ್ಯಕ್ಷ ಚನ್ನಗಾನಹಳ್ಳಿಮಲ್ಲೇಶ್ ವಹಿಸಿದ್ದರು. ಬಿಜೆಪಿ ಮುಖಂಡ ಎಂವೈಟಿ ಸ್ವಾಮಿ, ಪಟ್ಟಣಪಂಚಾಯಿತಿ ಸದಸ್ಯ ಎನ್.ಮಹಾಂತರೆಡ್ಡಿ, ಜೆಡಿಎಸ್ ಮುಖಂಡ ವೀರಭದ್ರಪ್ಪ, ಅಧ್ಯಕ್ಷ ಕರಿಬಸಪ್ಪ, ಪ್ರಧಾನ ಕಾರ್ಯದರ್ಶಿ ಬೆಂಕಿಗೋವಿಂದಪ್ಪ, ಉಪಾಧ್ಯಕ್ಷೆ ಮಮತಮ್ಮ, ಬಿಜೆಪಿ ಮುಖಂಡರಾದ ಶಂಕರಸ್ವಾಮಿ, ಎಚ್.ವಿ.ಪ್ರಕಾಶ್‌ರೆಡ್ಡಿ, ತ್ರಿಶೂಲ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### 2ನೇ ಬಾರಿಗೆ ಸಿಎಂ ಪದಕ ಪಡೆದ ಪಿಎಸ್‌ಐಗೆ ಗುತ್ತಿಗೆದಾರರ ಅಭಿನಂದನೆ



» ಚಳ್ಳಕೆರೆ

ತಾಲ್ಲೂಕಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಗುತ್ತಿಗೆದಾರರ ಸಂಘದ ವತಿಯಿಂದ ತಳಕು ಪಿಎಸ್‌ಐ ಕೆ.ಶಿವಕುಮಾರ್‌ರವರನ್ನು ಮಂಗಳವಾರ ಪೊಲೀಸ್ ಠಾಣೆಯಲ್ಲಿ ಆತ್ಮೀಯವಾಗಿ ಅಭಿನಂದಿಸಿ, ಸನ್ಮಾನಿಸಲಾಯಿತು. ಸಂಘದ ಗೌರವಾಧ್ಯಕ್ಷ ಕೋಡಿಹಳ್ಳಿಎಚ್. ತಿಪ್ಪೇಸ್ವಾಮಿ ಮಾತನಾಡಿ, ಪಿಎಸ್‌ಐ ಕೆ.ಶಿವಕುಮಾರ್ ಎರಡನೇ ಬಾರಿಗೆ ಮುಖ್ಯಮಂತ್ರಿ ಪದಕವನ್ನು ತಮ್ಮ ಉತ್ತಮ ಸೇವೆಗಾಗಿ ಪಡೆಯುತ್ತಿರುವುದು ಸಂತಸ ತಂದಿದೆ. ಪೊಲೀಸ್ ಇಲಾಖೆಯಲ್ಲಿ ಜನರನ್ನು ಮೆಚ್ಚಿಸುವ ಕೆಲಸ ಮಾಡುವುದು ಕಷ್ಟ. ಅದೇ ರೀತಿ ಸಮಾಜದಲ್ಲಿರುವ ದುಷ್ಟಶಕ್ತಿಗಳನ್ನು ನಿಯಂತ್ರಿಸುವುದು ಸಾಮಾನ್ಯದ ಮಾತಲ್ಲ, ಠಾಣೆಗೆ ಬರುವ ಎಲ್ಲಾ ವರ್ಗದ ಜನರಿಗೆ ಸೂಕ್ತ ಮಾರ್ಗದರ್ಶನ ನೀಡಿ ಅವರ ಸಮಸ್ಯೆಗಳನ್ನು ಪರಿಹರಿಸುವ ಕಾರ್ಯವನ್ನು ಪ್ರಶಸ್ತಿ ವಿಜೇತ ಕೆ.ಶಿವಕುಮಾರ್ ಹಲವಾರು ಬಾರಿ ಮಾಡಿದ್ಧಾರೆ. ತಳಕು ಠಾಣೆಯ ಪಿಎಸ್‌ಐ ಆಗಿಯೂ ಸಹ ಈ ಭಾಗದ ಜನರ ವಿಶ್ವಾಸವನ್ನು ಗಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಗುತ್ತಿಗೆದಾರರ ಸಂಘದ ವತಿಯಿಂದ ಅವರನ್ನು ಸನ್ಮಾನಿಸಿ ಶುಭಹಾರೈಸಲಾಗಿದೆ ಎಂದರು. ಮನ್ನೇಕೋಟೆ ಗ್ರಾಮ ಪಂಚಾಯಿತಿ ಸದಸ್ಯೆ ಲಕ್ಷ್ಮಿದೇವಿ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಜನರ ಮನಗೆದ್ದು ಕೆಲಸ ಮಾಡುವ ಅಧಿಕಾರಿಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಅದರಲ್ಲೂ ಪೊಲೀಸ್ ಇಲಾಖೆ ದಿನ 24ಗಂಟೆಗಳ ಕಾಲ ಜನರ ಸಂಪರ್ಕದಲ್ಲಿರುತ್ತಾರೆ. ಎಲ್ಲಾ ಸಮಸ್ಯೆಗಳನ್ನು ಸಮಯೋಚಿತವಾಗಿ ಎದುರಿಸಿ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಗೆ ಕೆ.ಶಿವಕುಮಾರ್ ತಮ್ಮ ಕಾರ್ಯದ ಮೂಲಕ ಇಲಾಖೆಯ ಗೌರವವನ್ನು ಸಹ ಕಾಪಾಡಿದ್ದಾರೆ. ಗ್ರಾಮದ ಜನತೆಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು.

ಪ್ರಶಸ್ತಿ ವಿಜೇತ ಕೆ.ಶಿವಕುಮಾರ್ ಮಾತನಾಡಿ, ನನ್ನಗೆ ಎರಡನೇ ಬಾರಿಗೆ ಮುಖ್ಯಮಂತ್ರಿ ಪದಕ ಬಂದಿರುವುದು ಹೆಮ್ಮೆಯಾದರೂ ಇನ್ನೂ ಹೆಚ್ಚಿನ ಕೆಲಸ ಮಾಡುವ ವಿಶ್ವಾಸ ಬಂದಿದೆ. ನನಗೆ ಮಾರ್ಗದರ್ಶನ ನೀಡಿದ ಹಿರಿಯ ಅಧಿಕಾರಿಗಳು ಸಹಕರಿಸಿದ ಪೊಲೀಸ್ ಇಲಾಖೆಯ ಸಿಬ್ಬಂದಿ ಹಾಗೂ ಅಧಿಕಾರಿ ವರ್ಗಕ್ಕೆ, ತಳಕು ವ್ಯಾಪ್ತಿಯ ಗ್ರಾಮಸ್ಥರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು. ವಾಲ್ಮೀಕಿ ಸಮಾಜದ ಮುಖಂಡ ತಿಪ್ಪೇಸ್ವಾಮಿ, ಬಾಲರಾಜು, ಖಾಸಿಂ, ಓಬಣ್ಣ, ಬೋವಿಸಮಾಜದ ಮುಖಂಡ ಅಂಜಿನಪ್ಪ ಮುಂತಾದವರು ಉಪಸ್ಥಿತರಿದ್ದರು.


ಪ್ರಮುಖ ಸುದ್ದಿ

## ಕರಿಯಮ್ಮ ದೇವಿಯ ರಥೋತ್ಸವ ಸಂಪನ್ನ

» ಹೊಸದುರ್ಗ

ತಾಲೂಕಿನ ಮಾಡದಕೆರೆ ಹೋಬಳಿಯ ಬೇವಿನಹಳ್ಳಿ ಗ್ರಾಮದ ಬೆಟ್ಟದ ಮೇಲೆ ನೆಲೆಸಿರುವ ಶಕ್ತಿ ದೇವತೆ ಶ್ರೀ ಬೇವಿನಹಳ್ಳಿ ಕರಿಯಮ್ಮ ದೇವಿಯ ರಥೋತ್ಸವ ಸೋಮವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಸಂಭ್ರಮ–ಸಡಗರದಿಂದ ವಿಜೃಂಭಣೆಯಿಂದ ನಡೆಯಿತು.

ಏ 9 ರಿಂದ ಅಮ್ಮನವರ ಜಾತ್ರಾ ಮಹೋತ್ಸವ ಆರಂಭವಾಗಿದ್ದು, ಧ್ವಜಾರೋಹಣ, ಭೇರಿತಾಂಡನ, ಅಂಕುರಾರ್ಪಣೆ ಸೇವೆ, ಮದಲಿಂಗಿತ್ತಿ ಶಾಸ್ತ್ರ, ಉಯ್ಯಾಲೆ ಉತ್ಸವ, ನಡೆ ಮುಡಿ ಉತ್ಸವ, ಜಲದಿ ಉತ್ಸವ, ಗಂಗಾಸ್ನಾನ, ಹೂವಿನ ಉತ್ಸವ, ಸರಗಂಬಲಿ ಸೇವೆ, ಕಂಬಳಿ ಸೇವೆ ಮತ್ತು ಉಯ್ಯಾಲೆ ಉತ್ಸವ ನಡೆದಿವೆ. ಅದರಂತೆಯೇ, ಸೋಮವಾರ ಮಧ್ಯಾಹ್ನ 3 ಗಂಟೆ ಸುಮಾರಿಗೆ ಅಮ್ಮನವರ ರಥೋತ್ಸವ ನಡೆಯಿತು. ಈ ವೇಳೆ ಸೇರಿದ್ದ ಭಕ್ತರು ಇಷ್ಟಾರ್ಥ ಸಿದ್ಧಿಗಾಗಿ ರಥಕ್ಕೆ ಬಾಳೆಹಣ್ಣು, ಹೂವು, ಉತ್ತುತ್ತಿ, ಚಿಲ್ಲರೆ ಹಣವನ್ನು ತೂರಿ ಭಕ್ತಿ ಸಮರ್ಪಿಸಿದರು. ಈ ವೇಳೆ ಸೋಮದೇವರುಗಳು ಕುಣಿತ ಭಕ್ತರ ಕಣ್ಮನ ಸೆಳೆಯಿತು.



ಜಾತ್ರಾ ಮಹೋತ್ಸವದ ವಿಶೇಷವಾಗಿ ಅಮ್ಮನವರ ಒಕ್ಕಲು–ಭಾಂದವರು, ಪೂಜಾರರು ಮತ್ತು ಭಕ್ತಾದಿಗಳು ಜಾತ್ರೆ ನಡೆಯುವ ಆವರಣದಲ್ಲಿ ತಾತ್ಕಾಲಿಕ ಪಾಳೇವುಗಳನ್ನು ಹಾಕಿಕೊಳ್ಳುತ್ತಾರೆ. ತಮ್ಮ ಪಾಳೆವುಗಳಲ್ಲಿ ನಿತ್ಯವೂ ಬಗೆ ಬಗೆಯ ರುಚಿಕರವಾದ ಅಡುಗೆಗಳನ್ನು ಮಾಡಿ, ಬಂದಂತಹ ನೆಂಟರಿಷ್ಟರಿಗೆ ಅನ್ನ ಸಂತರ್ಪಣೆ ಸೇವಾ ಕಾರ್ಯವನ್ನು ನಡೆಸುವುದು ಪ್ರತೀತಿಯಾಗಿದೆ. ಸಿಡಿ ಉತ್ಸವ ನೆರವೇರಿದ ಬಳಿಕ, ತಮ್ಮ ತಮ್ಮ ಗ್ರಾಮಗಳಿಗೆ ತೆರಳುವುದು ವಾಡಿಕೆಯಾಗಿದೆ. ಈ ಜಾತ್ರೆಗೆ ಬೇವಿನಹಳ್ಳಿ ಸೇರಿದಂತೆ, ತಾಲೂಕು, ಜಿಲ್ಲೆ ಮತ್ತು ಅಕ್ಕ–ಪಕ್ಕದ ಜಿಲ್ಲೆಗಳಿಂದಲೂ ಕೂಡ ಸಾವಿರಾರು ಭಕ್ತರ ದಂಡೇ ಹರಿದು ಬರುತ್ತದೆ.

### ಮಹಿಳಾ ಆಯೋಗ ಅಧ್ಯಕ್ಷರು ಪ್ರವಾಸ

ದಾವಣಗೆರೆ : ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಏಪ್ರಿಲ್ 16 ಮತ್ತು 17 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳುವರು. ಏಪ್ರಿಲ್ 14 ರಂದು ರಾತ್ರಿ 8.30 ಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಮ.1.30 ಕ್ಕೆ ಆವರಗೊಳ್ಳ ಗ್ರಾಮ ವ್ಯಾಪ್ತಿಯ ಕೇಂದ್ರೀಯ ವಿದ್ಯಾಲಯ ಹಿಂಭಾಗದಲ್ಲಿ ವಾಸಿಸುತ್ತಿರುವ ಕುಟುಂಬಗಳ ಸ್ಥಳಕ್ಕೆ ಭೇಟಿ ನೀಡುವರು.

# ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ರೈತ ವಿರೋಧಿ ನೀತಿ ಖಂಡಿಸಿ ಸಂಯುಕ್ತ ರೈತ ಸಂಘ ಪ್ರತಿಭಟನೆ

» **ಚಿತ್ರದುರ್ಗ**

ಕೇಂದ್ರ ಮತ್ತು ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಯನ್ನು ಖಂಡಿಸಿ ಸಂಯುಕ್ತ ಹೋರಾಟ-ಕರ್ನಾಟಕದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ರೈತ ಮುಖಂಡ ಕೆ.ಪಿ.ಭೂತಯ್ಯ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ರಾಜ್ಯ ಮತ್ತು ಕೇಂದ್ರ ಸರ್ಕಾರ ರೈತರ ವಿರುದ್ದವಾಗಿ ಕಾನೂನುಗಳನ್ನು ಜಾರಿಗೆ ತರುತ್ತಿವೆ. ಮೂರು ಕರಾಳ ಕಾಯಿದೆಗಳನ್ನು ಹಿಂದಕ್ಕೆ ಪಡೆಯಬೇಕು. ಹಿಂದಿನ ಬಿಜೆಪಿ.ಸರ್ಕಾರ ಜಾರಿಗೆ ತಂದಿದ್ದ ಭೂ ತಿದ್ದುಪಡಿ ಕಾಯಿದೆ,ಎ.ಪಿ.ಎಂ.ಸಿ.ತಿದ್ದುಪಡಿ ಕಾಯಿದೆ



ಜಾನುವಾರು ತಿದ್ದುಪಡಿ ಕಾಯಿದೆಗಳನ್ನು ಕೂಡಲೆ ರದ್ದುಗೊಳಿಸಿ ಬೆಳಗಾವಿಯಲ್ಲಿ ಅಕ್ರಮವಾಗಿ ತೆರೆದಿರುವ ಮೊದಲ ಖಾಸಗಿ ತರಕಾರಿ ಮಾರುಕಟ್ಟೆಯನ್ನು ಬಂದ್ ಮಾಡಿ ಎ.ಪಿ.ಎಂ.ಸಿ. ಕಟ್ಟಡದಲ್ಲಿಯೇ ತರಕಾರಿ ಮಾರುಕಟ್ಟೆಗೆ ಪುನರ್ ಚಾಲನೆ ನೀಡಬೇಕೆಂದು ಒತ್ತಾಯಿಸಿದರು.

ಕಮ್ಯುನಿಸ್ಟ್ ಮುಖಂಡ ಕಾಂ.ಜಿ.ಸಿ.ಸುರೇಶ್‌ಬಾಬು ಮಾತನಾಡುತ್ತ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಪ್ರತಿಯೊಂದು ವಸ್ತುವಿನ ಮೇಲೆ ಜಿ.ಎಸ್.ಟಿ. ಹೇರಿರುವುದರಿಂದ ಜನಸಾಮಾನ್ಯರು ತತ್ತರಿಸಿದ್ದಾರೆ. ದಿನನಿತ್ಯದ ಆಹಾರ ಪದಾರ್ಥಗಳ ಬೆಲೆ ಏರಿಕೆಯಿಂದ ಬಡವರು ಜೀವಿಸುವುದು ಕಷ್ಟವಾಗಿದೆ. ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಸಿಗುತ್ತಿಲ್ಲ. ಎ.ಪಿ.ಎಂ.ಸಿ.ಕಾಯಿದೆ ತಿದ್ದುಪಡಿಯನ್ನು ಹಿಂದಕ್ಕೆ ಪಡೆಯಬೇಕು. ಬರ ಪೀಡಿತ ಪ್ರದೇಶ ಚಿತ್ರದುರ್ಗಕ್ಕೆ ಭದ್ರಾ ಮೇಲ್ದಂಡೆ ಯೋಜನೆಯನ್ನು ಜಾರಿಗೊಳಿಸುವಲ್ಲಿ ಎರಡು ಸರ್ಕಾರಗಳಿಗೆ ಹಿತಾಸಕ್ತಿಯಿಲ್ಲ. ದೇಶಕ್ಕೆ ಅನ್ನ ನೀಡುವ ರೈತರ ಬಗ್ಗೆ ಕಾಳಜಿಯಿಲ್ಲದ ಸರ್ಕಾರಗಳಿಗೆ ಮುಂದಿನ ಚುನಾವಣೆಯಲ್ಲಿ ಸರಿಯಾದ ಪಾಠ ಕಲಿಸಲಾಗುವುದೆಂದು ಎಚ್ಚರಿಸಿದರು.

ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿ ರಾಜ್ಯ ಕಾರ್ಯದರ್ಶಿ ಕುಮಾರ್ ಸಮತಳ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ಕೃಷಿ ಕಾಯಿದೆ ಬದಲಾಗಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಕೃಷಿ ಉತ್ಪನ್ನಗಳ ಮಾರುಕಟ್ಟೆ ರಾಷ್ಟ್ರೀಯ ಚೌಕಟ್ಟು ನೀತಿಯನ್ನು ಹಿಂದಕ್ಕೆ ಪಡೆಯಬೇಕು. ರಾಜ್ಯ ಸರ್ಕಾರ ಎ.ಪಿ.ಎಂ.ಸಿ. ಭೂಸುಧಾರಣಾ ಕಾಯಿದೆಯನ್ನು ರದ್ದುಗೊಳಿಸಿ ರೈತರ ಹಿತ ಕಾಯಬೇಕು. ಅನಾದಿ ಕಾಲದಿಂದಲೂ ಜೀವನೋಪಾಯಕ್ಕಾಗಿ ಬಗರ್‌ಹುಕುಂ ಭೂಮಿ ಸಾಗುವಳಿ ಮಾಡುತ್ತಿರುವ ರೈತರಿಗೆ ಸಾಗುವಳಿ ಪತ್ರ ನೀಡಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದೆಂದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಬೆದರಿಕೆ ಹಾಕಿದರು.ಈಚಘಟ್ಟದ ಸಿದ್ದವೀರಪ್ಪ, ಧನಂಜಯಹಂಪಯ್ಯನಮಾಳಿಗೆ,ಡಿ.ಎಸ್.ಹಳ್ಳಿ ಮಲ್ಲಿಕಾರ್ಜುನ್, ಸತ್ಯಪ್ಪ ಮಲ್ಲಾಪುರ, ಕರ್ನಾಟಕ ಜನಶಕ್ತಿಯ ಟಿ.ಶಫಿವುಲ್ಲಾ, ಕೆ.ಸಿ.ಹೊರಕೇರಪ್ಪ, ಹೆಚ್.ಆರ್.ತಿಮ್ಮಯ್ಯ, ಕೆ.ಬಿ.ನಾಗರಾಜ್ ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ಆಂಜನೇಯ ಹುಟ್ಟುಹಬ್ಬ: ಹಾಲು ಹಣ್ಣು ವಿತರಣೆ



» **ಹೊಳಲ್ಕೆರೆ**

ಮಾಜಿ ಸಚಿವರು ಹಾಗೂ ಕೆಪಿಸಿಸಿ ರಾಜ್ಯ ಉಪಾಧ್ಯಕ್ಷರಾದ ಎಚ್.ಆಂಜನೇಯ ಅವರ ಜನ್ಮ ದಿನಾಚರಣೆ ಅಂಗವಾಗಿ ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ಬಾಣಂತಿಯರಿ ಹಾಗೂ ರೋಗಿಗಳಿಗೆ ಹಾಲು ಹಣ್ಣುಗಳನ್ನು ತಾಲೂಕು ಬ್ಲಾಕ್ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮಂಗಳವಾರ ವಿತರಣೆ ಮಾಡಿದರು.

ಬಳಿಕ ಮಾತನಾಡಿದ ತಾಲೂಕು ಬ್ಲಾಕ್ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಎಚ್.ಟಿ.ಹನುಮಂತಪ್ಪ ಮಾಜಿ ಸಚಿವರಾದ ಎಚ್.ಆಂಜನೇಯ ಅವರು ದೇಶ ಕಂಡ ಮಹಾನ್ ದಲಿತ ನಾಯಕ. ರಾಜ್ಯದಲ್ಲಿರುವ ಬಡವ ಬಲಿದ ದಲಿತ ಹಿಂದುಳಿದ ವರ್ಗ ಸೇರಿದಂತೆ ಎಲ್ಲ ವರ್ಗಗಳ ಕಲ್ಯಾಣಕ್ಕೆ ಸಚಿವರಾಗಿ ಅಪಾರ ಕೊಡುಗೆಯನ್ನ ನೀಡಿದ್ದಾರೆ. ಅವರು ಕರ್ನಾಟಕ ರಾಜ್ಯ ಕಂಡ ವಿಶೇಷ ವ್ಯಕ್ತಿತ್ವವುಳ್ಳ ಜನನಾಯಕರು. ಹಾಗಾಗಿ ಅವರ ಹುಟ್ಟು ಹಬ್ಬದ ದಿನಾಚರಣೆ ಅಂಗವಾಗಿ ಇಂದು ಹೊಳಲ್ಕೆರೆ ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆ ಸೇರಿದಂತೆ ವಿವಿಧ ಕಡೆಗಳಲ್ಲಿ ಹಾಲು ಹಣ್ಣು ವಿತರಣೆ ಮಾಡಲಾಗುತ್ತದೆ ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆ ಸದಸ್ಯರಾದ ಪಾಡಿಗಟ್ಟೆ ಸುರೇಶ್, ಕಿರಣ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷಪಿ.ಆರ್.ಶಿವಕುಮಾರ್ ಎಸ್.ಜಿ.ರಂಗಸ್ವಾಮಿ, ಎಂ.ಜಿ.ಲೋಹಿತ್ ಕುಮಾರ್, ಪುರಸಭೆ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್, ಸದಸ್ಯರಾದ ಮನ್ಸೂರು, ದಲಿತ ಸಂಘಟನೆಯ ಮುಖಂಡ ಡಿ.ಆರ್.ಪಾಂಡುರಂಗಸ್ವಾಮಿ, ಕೆಂಗುಂಟೆ ಜಯಣ್ಣ, ಪುರಸಭೆಯ ನಾಮನಿರ್ದೇಶಕ ಸದಸ್ಯರಾದ ಮದರ್ ಉಲ್ಲಾಖಾನ್, ಸಂಗನ ಗುಂಡಿ ಮಂಜುನಾಥ್, ಕರಿಯಪ್ಪ, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ರಾಜಪ್ಪ, ಎಂ.ಎಸ್.ನಾಗಪ್ಪ, ಗಂಗಸಮುದ್ರದ ದೇವೇಂದ್ರಪ್ಪ, ಮಕ್ಕಳ ತಜ್ಞರಾದ ಡಾ. ಮಂಜುನಾಥ್, ತಾಲೂಕು ಆರೋಗ್ಯ ಅಧಿಕಾರಿ ಡಾ.ರೇಖಾ, ವಕೀಲರ ರಮೇಶ್ ಸೇರಿದಂತೆ ಹಲವಾರು ಮುಖಂಡರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

### ಸಹಕಾರ ಸಂಘದಲ್ಲಿ ಅಂಬೇಡ್ಕರ್ ಜಯಂತಿ



» **ಹರಿಹರ**

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ನಿಯಮಿತ) ಹರಿಹರ ಕಚೇರಿಯಲ್ಲಿ 134 ನೇ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷರಾದ ಹಾಲೇಶ್ ಗೌಡ್ರು, ಉಪಾಧ್ಯಕ್ಷರಾದ ಡಾಕ್ಟರೇಟ್ ಪುರಸ್ಕೃತರಾದ ಕೆ. ಜೈಮುನಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೈಯದ್ ಇರ್ಫಾನ್ ಉಲ್ಲಾ, ಪ್ರವೀಣ್ ಮಜ್ಗಿ, ಇದಾಯಿತ್ ಉಲ್ಲಾ ಸಿಬ್ಬಂದಿಗಳಾದ ಪರಶುರಾಮ್, ಸಂತೋಷ್ ಮುಂತಾದವರು ಉಪಸ್ಥಿತರಿದ್ದರು.

### ಕಬ್ಬಳ ಗ್ರಾಮದಲ್ಲಿ ಅಂಬೇಡ್ಕರ್ ಜಯಂತಿ



» **ಹೊಸದುರ್ಗ**

ತಾಲ್ಲೂಕಿನ ಕಬ್ಬಳ ಗ್ರಾಮದಲ್ಲಿ ಡಾಕ್ಟರ್ ಬಿಆರ್ ಅಂಬೇಡ್ಕರ್ ಅವರ 134 ನೇ ಜಯಂತಿಯನ್ನು ಕಬ್ಬಳ ಸಮಸ್ತ ಗ್ರಾಮಸ್ಥರು ಸೇರಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ವಸಂತ್ ಕುಮಾರ್ ಹಾಗೂ ಕಬ್ಬಳದ ಪ್ರಮುಖರಾದ ಸತೀಶ್, ವೀರಭದ್ರಸ್ವಾಮಿ, ಲೋಹಿತ್ ಶಿವಲಿಂಗಯ್ಯ, ನಟರಾಜಪ್ಪ , ಹರೀಶ್,ಮೇಸ್ತ್ರಿ ರಂಗಣ್ಣ ,ತಮ್ಮಯ್ಯ ಹಾಗೂ ರಮೇಶ್ ಉಪಸ್ಥಿತರಿದ್ದರು. ಅಂಬೇಡ್ಕರ್ ಅವರ ಆಶಯದಂತೆ ಓದುವ ಬಡ ಮಕ್ಕಳಿಗೆ ಪುಸ್ತಕ ಪೆನ್ನುಗಳನ್ನು ವಿದ್ಯಾರ್ಥಿಗಳಿಗೆ ನೀಡುವುದರ ಮೂಲಕ ಅಂಬೇಡ್ಕರ್ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.



**ಚಳ್ಳಕೆರೆ ತಾಲ್ಲೂಕಿನಾದ್ಯಂತ ಸೋಮವಾರ ಸಂಜೆ ಬೀಸಿದ ಗಾಳಿಗೆ ನೇರಲಗುಂಟೆ ಗ್ರಾಮದಲ್ಲಿ ಕೆಂಚಪ್ಪ ಎಂಬುವವರ ಮನೆಯ ಮೇಲ್ಚಾವಣಿ ಹಾಗೂ ಶೀಟ್‌ಗಳು ಗಾಳಿಗೆ ಹಾರಿಹೋಗಿ ಸುಮಾರು 50ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ.**

## ಅಂಬೇಡ್ಕರ್ ವಿಚಾರ ವೇದಿಕೆಯಿಂದ ಮಾತಾ ರಮಾಬಾಯಿ ಅಂಬೇಡ್ಕರ್ ಸರ್ಕಲ್ ಉದ್ಘಾಟನೆ

» **ಚಿತ್ರದುರ್ಗ**

ಅಂಬೇಡ್ಕರ್ ಮುಕ್ತ ವಿಚಾರ ವೇದಿಕೆಯಿಂದ ಸರ್ಕಾರಿ ಕಲಾ ಕಾಲೇಜು ಹಿಂಭಾಗ ಮಾತಾ ರಮಾಬಾಯಿ ಅಂಬೇಡ್ಕರ್ ಸರ್ಕಲ್ ಉದ್ಘಾಟಿಸಲಾಯಿತು.

ಸಾಮಾಜಿಕ ಚಿಂತಕ ಪ್ರೊ.ಸಿ.ಕೆ.ಮಹೇಶ್ ಮಾತನಾಡಿ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಜೀವನದಲ್ಲಿ ತಿರುವು ಕಂಡುಕೊಳ್ಳಲು ಅವರ ಪತ್ನಿ ಮಾತಾ ರಮಾಬಾಯಿ ತ್ಯಾಗವಿದೆ. ಪ್ರತಿ ದಲಿತರ ಮನೆಯಲ್ಲಿಯೂ ರಮಾಬಾಯಿಯಂತವರಿದ್ದಾರೆ. ಅವರಿಗೆ ಅವಕಾಶಗಳನ್ನು ಕೊಡಬೇಕೆಂದು ಹೇಳಿದರು.

ಡಾ.ಬಿ.ಆರ್.ಅಂಬೇಡ್ಕರ್ ವ್ಯಾಸಂಗಕ್ಕಾಗಿ ಅಮೇರಿಕಾಕ್ಕೆ ಹೋಗುವುದು ಬೇಡ ಎಂದು ಕುಟುಂಬದವರೆಲ್ಲಾ ಹಠ ಹಿಡಿದು ಕುಳಿತಾಗ ಪತ್ನಿ ರಮಾಬಾಯಿ ಅಮೇಕಾರಕ್ಕೆ ತೆರಳುವಂತೆ ಡಾ.ಬಿ.ಆರ್.ಅಂಬೇಡ್ಕರ್‌ಗೆ ಉತ್ತೇಜನ ನೀಡಿದರು. ಧಾರವಾಡದಲ್ಲಿದ್ದ ಅನಾಥ ಮಕ್ಕಳ ಶಾಲೆಯಲ್ಲಿ ಊಟಕ್ಕೆ ಇಲ್ಲದಂತ ಕಷ್ಟದಲ್ಲಿ ಮಾತಾ ರಮಾಬಾಯಿ ತಮ್ಮ ಮೈಮೇಲಿದ್ದ ಚಿನ್ನದ ಒಡವೆಗಳನ್ನು ಮಾರಾಟ ಮಾಡಿ




ಮಕ್ಕಳಿಗೆ ಊಟ ಹಾಕುತ್ತಾರೆ. ಅಂಬೇಡ್ಕರ್‌ರವರ ಇಡಿ ಕುಟುಂಬದ ಹೊಣೆಯನ್ನು ನಿಭಾಯಿಸಿದ ಮಹಾನ್ ತ್ಯಾಗಮಯಿ ಮಾತಾ ರಮಾಬಾಯಿ ಎಂದು ಸಿ.ಕೆ.ಮಹೇಶ್ ಸ್ಮರಿಸಿದರು.

ಡಿ.ದುರುಗೇಶಪ್ಪ, ಕೆ.ಕುಮಾರ್, ಸಿ.ಎ.ಚಿಕ್ಕಣ್ಣ, ಟಿ.ರಾಮು, ವಿಶ್ವಾನಂದ, ವೇದಾಂತ್, ಸಿದ್ದೇಶ್, ಪ್ರೊ.ಕುಮಾರ್, ಚಕ್ರವರ್ತಿ, ಶಿಕ್ಷಕಿ ಬಿ.ಟಿ.ಲೋಲಾಕ್ಷಮ್ಮ, ಚಕ್ರವರ್ತಿ, ಲೇಖಕ ಹೆಚ್.ಆನಂದಕುಮಾರ್ ಇನ್ನು ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.

### ಕೆಳಗೋಟೆಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆ



» **ಚಿತ್ರದುರ್ಗ**

ಕೆಳಗೋಟೆಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಸಂಘದಿಂದ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ 134 ನೇ ಜಯಂತಿಯನ್ನು ಸೋಮವಾರ ಆಚರಿಸಲಾಯಿತು.ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಅಂಬೇಡ್ಕರ್‌ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡುತ್ತ ಕೇವಲ ದಲಿತರಿಗಷ್ಟೆ ಡಾ.ಬಿ.ಆರ್. ಅಂಬೇಡ್ಕರ್ ಸಂವಿಧಾನವನ್ನು ರಚಿಸಿಲ್ಲ. ಈ ದೇಶದ ಪ್ರತಿಯೊಬ್ಬ ಪ್ರಜೆಯೂ ಸ್ವಾಭಿಮಾನ, ಸ್ವಂತ್ರವಾಗಿ ಬದುಕಬೇಕೆಂದು ಎಲ್ಲಾ ಜಾತಿ ಧರ್ಮದವರಿಗೂ ಸಮಾನತೆಯನ್ನು ಕೊಡುಗೆಯಾಗಿ ನೀಡಿದ್ದಾರೆ. ಎಲ್ಲರೂ ಸಂವಿಧಾನದ ಆಶಯಗಳಂತೆ ಬದುಕಿದಾಗ ಮಾತ್ರ ಡಾ.ಬಿ.ಆರ್. ಅಂಬೇಡ್ಕರ್‌ರವರಿಗೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಹೇಳಿದರು.ಅಂಗಡಿ ಮಂಜಣ್ಣ, ಸಾಗಲಗಟ್ಟೆ ಜಯಣ್ಣ, ನ್ಯಾಯವಾದಿ ಬೀಸ್ನಳ್ಳಿ ಜಯಣ್ಣ, ನಗರಸಭೆ ಮಾಜಿ ಸದಸ್ಯ ಪ್ರಕಾಶ್, ರಾಜಣ್ಣ, ಚಂದ್ರು, ರಂಗನಾಥ್, ನ್ಯಾಯವಾದಿ ಮಂಜುಳಮ್ಮೈಲಾರಣ್ಣ, ಮಂಜು, ಕಿರಣ್, ಹನುಮಂತ, ಮಾರುತಿ, ಬಾಬು, ಶ್ರೀನಿವಾಸ್, ಹಾಲಪ್ಪ, ಸಂತೋಷ್, ದೇವ, ಪರಶುರಾಂ, ನರಸಿಂಹಮೂರ್ತಿ, ನಾಗರಾಜ್, ಶಿಕ್ಷಕಿ ಲೋಲಾಕ್ಷಮ್ಮ ಇನ್ನು ಮುಂತಾದವರು ಅಂಬೇಡ್ಕರ್ ಜಯಂತಿಯಲ್ಲಿ ಪಾಲ್ಗೊಂಡಿದ್ದರು.

## ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದಿಂದ ಡಾ.ಅಂಬೇಡ್ಕರ್ ಜಯಂತಿ

» **ಚಿತ್ರದುರ್ಗ**

ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದಿಂದ ಡಾ.ಬಿ.ಆರ್.ಅಂಬೇಡ್ಕರ್‌ರವರ ಜಯಂತಿಯನ್ನು ಸೋಮವಾರ ಆಚರಿಸಲಾಯಿತು.

ಡಾ.ಬಿ.ಆರ್.ಅಂಬೇಡ್ಕರ್‌ರವರ ಬೃಹಧಾಕಾರ ವಾದ ಫೋಟೋಗೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ

ಅಂಬೇಡ್ಕರ್‌ರವರ ಆಸೆಯಂತೆ ಶಿಕ್ಷಣ, ಸಂಘಟನೆ, ಹೋರಾಟದಿಂದ ಮಾತ್ರ ಎಲ್ಲರೂ ತಮಗೆ ಸಿಗಬೇಕಾದ ನ್ಯಾಯಯುತವಾದ ಹಕ್ಕುಗಳನ್ನು ಪಡೆದುಕೊಳ್ಳಬಹುದು. ಬಾಲ್ಯದಲ್ಲಿಯೇ ಹಿಂಸೆ, ಅವಮಾನ, ಅಸ್ಪೃಶ್ಯತೆಯನ್ನು ಅನುಭವಿಸಿದ ಡಾ.ಬಿ.ಆರ್. ಅಂಬೇಡ್ಕರ್ ಹೊರದೇಶಗಳಲ್ಲಿ ವ್ಯಾಸಂಗ ಮಾಡಿ ಅಪಾರ ಪಾಂಡಿತ್ಯವನ್ನು ಪಡೆದಿದ್ದರಿಂದ



ಸಂವಿಧಾನವನ್ನು ರಚಿಸಲು ಸಾಧ್ಯವಾಯಿತು. ಅದಕ್ಕಾಗಿ ಎಲ್ಲರೂ ಸಂವಿಧಾನದ ಆಶಯಗಳಂತೆ ನಡೆದುಕೊಳ್ಳಬೇಕೆಂದು ಮನವಿ ಮಾಡಿದರು.

ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಉಪಾಧ್ಯಕ್ಷ ಎಂ.ಮಲ್ಲಿಕಾರ್ಜುನ್, ತಾಲ್ಲೂಕು ಅಧ್ಯಕ್ಷ ಜಾವೀದ್‌ಭಾಷ, ಮನ್ಸೂರ್‌ಭಾಷ, ಟಿ.ಬಸವರಾಜ್, ಎ.ನಾಗರಾಜ್, ಪಿ.ರಾಜಣ್ಣ

ಅಶೋಕ್, ಸುರಂಗಿ ತಿಪ್ಪೇಶ್, ಪಿ.ವೀರೇಶ್, ಹನುಮಂತಪ್ಪ, ಡಿ.ಲಕ್ಷ್ಮಣ, ನಾಗಭೂಷಣ, ಎಂ.ಸುರೇಶ್, ರಾಜಣ್ಣ, ಸಂದೀಪ್, ಪಿ.ಲಕ್ಷ್ಮಿದೇವಿ ಇನ್ನು ಮುಂತಾದವರು ಅಂಬೇಡ್ಕರ್ ಜಯಂತಿಯಲ್ಲಿ ಭಾಗವಹಿಸಿದ್ದರು.

### ಮಹಾತ್ಮಗಾಂಧಿ ಚಾರಿಟಬಲ್ ಟ್ರಸ್ಟ್‌ನಿಂದ ಡಾ.ಅಂಬೇಡ್ಕರ್ ಜಯಂತಿ



» **ಚಿತ್ರದುರ್ಗ**

ಮಹಾತ್ಮಗಾಂಧಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ 134 ನೇ ಜಯಂತಿಯನ್ನು ಸೋಮವಾರ ಆಚರಿಸಲಾಯಿತು.ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಮಹಾತ್ಮಗಾಂಧಿಜಿರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಮಹಾತ್ಮಗಾಂಧಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ನಜೀರ್‌ಸಾಬ್‌ಡಾ.ಬಿ.ಆರ್. ಅಂಬೇಡ್ಕರ್ ಸಂವಿಧಾನ ರಚಿಸಿ ದೇಶದ ಪ್ರತಿಯೊಬ್ಬರಿಗೂ ಸಮಾನತೆಯನ್ನು ನೀಡಿದ್ದಾರೆ. ಅದೇ ರೀತಿ ಮಹಾತ್ಮಗಾಂಧಿ ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ಧ ಹೋರಾಡಿದ್ದರ ಫಲವಾಗಿ ಇಡಿ ದೇಶದ ಜನ ಸ್ವತಂತ್ರವಾಗಿ ಬದುಕುತ್ತಿದ್ದಾರೆ. ಈ ಇಬ್ಬರು ಮಹನೀಯರ ಆದರ್ಶಗಳಂತೆ ಎಲ್ಲರೂ ಜೀವಿಸಬೇಕಿದೆ ಎಂದರು.ಮಹಾತ್ಮಗಾಂಧಿ ಚಾರಿಟಬಲ್ ಟ್ರಸ್ಟ್ ಕಾರ್ಯದರ್ಶಿ ನದೀಮುಲ್ಲಾ, ವೇಣುಗೋಪಾಲ್, ರಹಮತ್‌ವುಲ್ಲಾಖಾನ್, ತಿಪ್ಪೇಸ್ವಾಮಿ ಇನ್ನು ಅನೇಕರು ಜಯಂತಿಯಲ್ಲಿ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

## ಪತ್ರಿಕಾ ವಿತರಣೆಗೆ ಉಚಿತ ಬ್ಯಾಗ್ ವಿತರಣೆ

» **ಹೊಳಲ್ಕೆರೆ**

ಡಾ.ಬಿ.ಆರ್ ಅಂಬೇಡ್ಕರ್ ಅವರ ಬದುಕು ಮತ್ತು ಸಾಧನೆಗಳನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು ಎಂದು ಹಿರಿಯ ಪತ್ರಕರ್ತ ಹಾಗೂ ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತ ಎಸ್.ವೇದಮೂರ್ತಿ ತಿಳಿಸಿದರು.

ಅವರು ಹೊಳಲ್ಕೆರೆ ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನದಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ಅವರ 134 ನೇ ಹಾಗೂ ಬಾಬು ಜಗ್‌ಜೀವನ್ ರಾಮ್ ಅವರ ಜನ್ಮದಿನಾಚರಣೆ ಸಮಾರಂಭದಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರಿಗೆ ಹಾಗೂ ಪತ್ರಿಕಾ ವಿತರಕರಿಗೆ ಬ್ಯಾಗು ವಿತರಣೆ ಮಾಡಿ ಮಾತನಾಡಿದರು.

ಡಾ. ಬಿ.ಆರ್.ಅಂಬೇಡ್ಕರ್ ದೇಶದ ಸಂವಿಧಾನವನ್ನು ರಚಿಸಿಕೊಟ್ಟವರು. ಸಂವಿಧಾನದ ಎಲ್ಲಾ ಸೌಲಭ್ಯಗಳನ್ನು ನಾವೆಲ್ಲರೂ ಪಡೆದುಕೊಳ್ಳುತ್ತಿದ್ದೇವೆ. ಸಂವಿಧಾನದ ಮೂಲ ಅವಶ್ಯಗಳನ್ನು ಈಡೇರಿಸುವಲ್ಲಿ ಸರ್ಕಾರಗಳು ನಿರಂತರ ಶ್ರಮಿಸುತ್ತಿವೆ. ಜಾತಿ ಧರ್ಮ ಎನ್ನದೆ ಎಲ್ಲ ವರ್ಗದ ಜನರ ಕಲ್ಯಾಣಕ್ಕೆ ಸಂವಿಧಾನದಲ್ಲಿ ಅವಕಾಶ ನೀಡಲಾಗಿದೆ ಎಂದು ತಿಳಿಸಿದರು.

ಪುರಸಭೆಯ ಉಪಾಧ್ಯಕ್ಷೆ ಎಚ್.ಆರ್. ನಾಗರತ್ನ ವೇದಮೂರ್ತಿ ಮಾತನಾಡಿ, ಇವತ್ತು




ಪತ್ರಕರ್ತರು ಸಮಾಜದ ಕಣ್ಣುಗಳಾಗಿ ಕೆಲಸ ಮಾಡುತ್ತಿದ್ದಾರೆ. ಸಮಾಜದಲ್ಲಿ ನಡೆಯುವ ಹಲವಾರು ಘಟನೆಗಳನ್ನು ಜನರ ಮುಂದೆ ತೆರೆದಿಡುವ ಕೆಲಸವನ್ನು ದಕ್ಷತೆಯಿಂದ ನಿರ್ವಹಿಸುತ್ತಿದ್ದಾರೆ. ಪತ್ರಕರ್ತರಿಗೆ ಸರ್ಕಾರ ಒಂದಿಷ್ಟು ಸೌಲಭ್ಯ ಕೊಡಲು ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಯುವ ಪ್ರಶಸ್ತಿ ಪುರಸ್ಕೃತ ಎ.ಚಿತ್ತಪ್ಪ ಮಾತನಾಡಿ, ಡಾ. ಬಿ.ಆರ್.ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಅವರು ಈ ದೇಶ ಕಂಡ ಅದ್ಭುತ ಪ್ರತಿಭೆಗಳು. ದೇಶಕ್ಕೆ ಸಂವಿಧಾನವನ್ನು ರಚಿಸಿ ಜಾತ್ಯತೀತ ಸಿದ್ಧಾಂತವನ್ನು ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ತೋರಿಸಿದ್ದಾರೆ.. ಮಹನೀಯರ ಮೌಲ್ಯಗಳನ್ನು ನಾವೆಲ್ಲರೂ ಬದುಕಿಗೆ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಪತ್ರಕರ್ತರಾದ ಶಿವಣ್ಣ, ಸುರೇಶ್‌ಅವಿನಹಟ್ಟಿ, ನಿರಂಜನ್ ಉಪಸ್ಥಿತರಿದ್ದರು.

ಇದೇ ಸಮಯದಲ್ಲಿ ಹೊಳಲ್ಕೆರೆ ಪತ್ರಕರ್ತರ ಸಂಘದ ವತಿಯಿಂದ ಪತ್ರಿಕೆ ಹಂಚಿಕೆ ಮಾಡುವ ಹುಡುಗರಿಗೆ ಹಾಗೂ ವಿತರಕರಿಗೆ ಉಚಿತವಾಗಿ ಬ್ಯಾಗ್ಗಳನ್ನ ವಿತರಣೆ ಮಾಡಲಾಯಿತು.

### ಶ್ರೀಲಕ್ಷ್ಮಿರಂಗನಾಥಸ್ವಾಮಿ ರಥೋತ್ಸವ



**ಚಳ್ಳಕೆರೆ ತಾಲ್ಲೂಕಿನ ಬೆಳಗೆರೆ ಗ್ರಾಮದ ಕೆರೆಏರಿಯ ಬಳಿ ಇರುವ ಶ್ರೀಲಕ್ಷ್ಮಿರಂಗನಾಥಸ್ವಾಮಿ ರಥೋತ್ಸವ ಸೋಮವಾರ ಅದ್ದೂರಿಯಾಗಿ ನಡೆಯಿತು. ಕಳೆದ ಸುಮಾರು ಆರು ದಿನಗಳಿಂದ ನಾಡಿನ ವಿವಿಧ ಭಾಗಗಳಿಂದ ಭಕ್ತರು ಆಗಮಿಸಿ ಶ್ರೀಸ್ವಾಮಿಯ ದರ್ಶನ ಪಡೆದು ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.**

## ಫಾಸ್ಟ್ ನ್ಯೂಸ್

### ಏ.26 ರಂದು ಮಹಿಳಾ ಸ್ವಸಹಾಯ ಸಂಘಗಳ ಸಮಾವೇಶ; ಸಿಎಂ ಬಾಗಿ



» **ಹೊಸದುರ್ಗ**

ಶ್ರೀ ಕ್ಷೇತ್ರ ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಪುಷ್ಪಗಿರಿ ಮಹಾಸಂಸ್ಥಾನ,, ಶ್ರೀ ಸಿದ್ದರಾಮೇಶ್ವರ ವಿದ್ಯಾ ಸಂಸ್ತೆ ವತಿಯಿಂದ ಪಟ್ಟಣದ ಸಿದ್ದರಾಮೇಶ್ವರ ಸಮುದಾಯ ಭವನದ ಅವರಣದಲ್ಲಿ ಏ.26ರ ಶನಿವಾರ ಮಧ್ಯಾಹ್ನ 3 ಗಂಟೆಗೆ ರಾಜ್ಯ ಮಟ್ಟದ ಪುಷ್ಪಗಿರಿ ಮಹಿಳಾ ಸ್ವಸಹಾಯ ಸಂಘಗಳ ಸಮಾವೇಶ ಮತ್ತು ಸಾಂಸ್ಕೃತಿಕ ಉತ್ಸವ –2025 ಆಯೋಜಿಸಲಾಗಿದೆ ಎಂದು ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.ಪಟ್ಟಣದ ಜಿ. ಬಸಪ್ಪ ಅತಿಥಿ ಭವನದಲ್ಲಿ ಸೋಮವಾರ ಅಯೋಜಿಸಿದ್ದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಶ್ರೀಗಳು ಸಮಾವೇಶದಲ್ಲಿ ರಾಜ್ಯದ ಮುಖ್ಯಮಂತ್ರಿ, ಸಚಿವರು, ಶಾಸಕರುಗಳು, ಸೇರಿದಂತೆ ನಾನಾ ರಾಜಕೀಯ ಮುಖಂಡರು, ಚಲನಚಿತ್ರ ನಟ, ನಟಿಯರು ಭಾಗವಹಿಸಲಿದ್ದಾರೆ. ಸಮಾವೇಶದ ಅಂಗವಾಗಿ ಪಟ್ಟಣದ ಗಣೇಶ ದೇವಸ್ಥಾನ ಮುಂಭಾಗದಿಂದ ಮುಖ್ಯ ರಸ್ತೆಯಲ್ಲಿ ನೂರಾರು ಮಹಿಳೆಯರು ಪೂರ್ಣ ಕುಂಭ ಹೊತ್ತು ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಮೆರವಣಿಗೆಯ ಮೂಲಕ ಸಾಗಿ ಶ್ರೀ ಸಿದ್ದರಾಮೇಶ್ವರ ಸಮುದಾಯ ಭವನ ಅವರಣದಲ್ಲಿ ನಡೆಯವ ವೇದಿಕೆ ಕಾರ್ಯಕ್ರಮದಲ್ಲಿ ವಚನ ಗಾಯನ, ಸಾಂಸ್ಕೃತಿಕ ಕಾರ್ಯಕ್ರಮ, ಮಹಿಳೆಯರ ಸ್ವಾವಲಂಭಿ ಬದುಕಿಗೆ ವಿಶೇಷ ಉಪನ್ಯಾಸ ನಡೆಯಲಿದೆ ಎಂದು ಹೇಳಿದರು.ಪ್ರತಿ ವರ್ಷ ಒಂದೊಂದು ಜಿಲ್ಲೆಯಲ್ಲಿ ರಾಜ್ಯ ಮಟ್ಟದ ಕಾರ್ಯಕ್ರಮ ಅಯೋಜನೆ ಮಾಡಿಕೊಂಡು ಬರಲಾಗುತ್ತಿದೆ. ಪ್ರಸ್ತುತ ಕಾಯಕ ತತ್ವದಡಿಯಲ್ಲಿ ದುಡಿಯುತ್ತಿರುವ ಹೊಸದುರ್ಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು ರಾಜ್ಯದ ನಾನಾ ಬಾಗಗಳಿಂದ ಹೆಚ್ಚಿನ ಜನರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಗೋಷ್ಠಿಯಲ್ಲಿ ಮರಿದಿಮ್ಮಣ್ಣ, ಲೋಕೇಶ್, ಟಿ. ಪಾಲಾಕ್ಷಪ್ಪ, ಬಸವರಾಜ್, ಧರಣಪ್ಪ, ಕೆ ಎಸ್. ರೇವಣಸಿದ್ದಪ್ಪ, ಎಂ.ಪಿ.ರಂಗೇಶ್, ಶಶಿಧರ್, ರಮೇಶ್, ವಕೀಲ ಡಿ.ಟಿ. ಲಿಂಗರಾಜು, ಇತರರು ಇದ್ದರು.

### ಬಾಳೆ ತೋಟಕ್ಕೆ ಬೆಂಕಿ: 10 ಸಾವಿರ ಸಹಾಯ ಧನ

» **ಹೊಸದುರ್ಗ**

ತಾಲೂಕಿನ ಮಾಡದಕೆರೆ ವಲಯದ ಡಿ.ಕೆ. ಹಳ್ಳಿ ಗ್ರಾಮದಲ್ಲಿ ಕಮಲಮ್ಮ ಶಿವಮೂರ್ತಿ ಎನ್ನುವವರ ಬಾಳೆ ತೋಟಕ್ಕೆ ಆಕಸ್ಮಿಕವಾಗಿ ಬೆಂಕಿ ಬಿದ್ದು ಬಾಳೆ ತೋಟ ನಾಶವಾಗಿದ್ದು ಈ ಸಂದರ್ಭದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಯೋಜನಾಧಿಕಾರಿ ಚಂದ್ರಶೇಖರ್ ಬೆಂಕಿಗೆ ಆಹುತಿ ಆಗಿರುವ ಬಾಳೆ ತೋಟವನ್ನು ಪರಿಶೀಲನೆ ಮಾಡಿ ನೊಂದ ಕುಟುಂಬಕ್ಕೆ ಸಾಂತ್ವನವನ್ನು ಹೇಳಿ ಮಂಜೂರಾಗಿದ್ದ 10 ಸಾವಿರ ರೂಗಳ ಮಂಜೂರಾತಿ ಪತ್ರವನ್ನ ನೀಡಿದರು. ಈ ಸಂಧರ್ಬದಲ್ಲಿ ಊರಿನ ಗಣ್ಯರಾದ ಹನುಮಂತಪ್ಪ, ವೆಂಕಟೇಶ್. ಶಿವಮೂರ್ತಿ. ಮತ್ತು ಸ್ವಸಾಯ ಸಂಘದ ಸದಸ್ಯರ ಉಪಸ್ಥಿತಿಯಲ್ಲಿ ಹಾಗೂ ಒಕ್ಕೂಟ ಪದಾಧಿಕಾರಿಗಳು ವಲಯ ಮೇಲ್ವಿಚಾರಕ ಸುಜಯ್ ಮತ್ತಿತರರು ಉಪಸ್ಥಿತರಿದ್ದರು.

### ಲಾರಿ ಮತ್ತು ಬೈಕ್ ನಡುವೆ ಡಿಕ್ಕಿ ಅರುಣ್‌ಕುಮಾರ್ ಸ್ಥಳದಲ್ಲೇ ಸಾವು

» **ಚಳ್ಳಕೆರೆ**

ತಾಲ್ಲೂಕಿನ ಕುರುಡಿಹಳ್ಳಿ ಗ್ರಾಮದ ಗೋಶಾಲೆ ಸಮೀಪದ ರಸ್ತೆಯಲ್ಲಿ ಲಾರಿಯೊಂದು ಮೋಟಾರ್ ಬೈಕ್ ಮೇಲೆ ಹರಿದ ಪರಿಣಾಮವಾಗಿ ಬೈಕ್



ಸವಾರ ಎಸ್.ಎನ್. ಅರುಣ್‌ಕುಮಾರ್(41) ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಚಿತ್ರದುರ್ಗ ಕಡೆಯಿಂದ ಚಳ್ಳಕೆರೆ ಕಡೆಯಿಂದ ಬರುತ್ತಿದ್ದ ಲಾರಿಚಾಲಕ ಕೆ.ರಾಘವೇಂದ್ರ ತನ್ನ ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಳ್ಳಕೆರೆಯಿಂದ ಚಿತ್ರದುರ್ಗಕ್ಕೆ ತನ್ನ ಬೈಕ್‌ನಲ್ಲಿ ಹೋಗುತ್ತಿದ್ದ ಬೆಸ್ಕಾಂನ ಕಿರಿಯ ಸಹಾಯಕ ಎಸ್.ಎನ್.ಅರುಣ್‌ಕುಮಾರ್ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ಅರುಣ್‌ಕುಮಾರ್ ಬೈಕ್ ಪೂರ್ಣನಜ್ಜುಗುಜ್ಜಾಗಿದ್ದು ತೀವ್ರ ರಕ್ತಗಾಯಗಳಿಂದ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸುದ್ದಿತಿಳಿದ ಕೂಡಲೇ ಠಾಣಾ ಇನ್ಸ್‌ಪೆಕ್ಟರ್ ರಾಜಫಕ್ರುದ್ದೀನ್ ದೇಸಾಯಿ, ಪಿಎಸ್‌ಐ ಜೆ.ಶಿವರಾಜ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿದ್ದಾರೆ. ಅಪಘಾತದಲ್ಲಿ ಬೆಸ್ಕಾಂ ಕಿರಿಯ ಸಹಾಯಕ ಎಸ್.ಎನ್.ಅರುಣ್‌ಕುಮಾರ್ ಮೃತಪಟ್ಟ ಸುದ್ದಿ ಕೇಳಿದ ಬೆಸ್ಕಾಂ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಆಸ್ಪತ್ರೆಯ ಶವಗಾರಕ್ಕೆ ದೌಡಾಯಿಸಿದರು.

## ವಿಚಿತ್ರ ಸ್ವಾರ್ಥದ

# ನ್ಯಾಯ ನೀತಿ.....



**ನನ್ನ ತಾಯಿ ದೈವೀ ಸ್ವರೂಪಿ,**
**ನನ್ನ ತಂದೆ ಮುಗ್ಧ ಮತ್ತು ಶ್ರಮ ಜೀವಿ, ನನ್ನ ಅಜ್ಜ ಅಜ್ಜಿ ನಿಷ್ಕಲ್ಮಶ ಮನಸ್ಸಿನವರು,**
**ನನ್ನ ಹೆಂಡತಿ ಪ್ರೀತಿಯ ಸಾಗರ,**
**ನನ್ನ ಅಣ್ಣ ಮಮತೆಯ ಸಾಕಾರ ಮೂರ್ತಿ,**
**ನನ್ನ ಅತ್ತಿಗೆ ಮಮತಾಮಯಿ,**
**ನನ್ನ ತಂಗಿ ಕರುಣಾಮಯಿ,**
**ನನ್ನ ಗಂಡ ದಕ್ಷ ಪ್ರಾಮಾಣಿಕ,**
**ನನ್ನ ಮಗ ಮಗಳು ಅತ್ಯಂತ ಸಹೃದಯಿಗಳು,..........**

ಹೀಗೆ ಸಾಮಾನ್ಯವಾಗಿ ಎಲ್ಲರೂ ಬೇರೆ ಬೇರೆ ಸಂದರ್ಭಗಳಲ್ಲಿ ತಮ್ಮವರ ಬಗ್ಗೆ ಅದರಲ್ಲೂ ರಕ್ತ ಸಂಬಂಧಿಗಳ ಬಗ್ಗೆ ಹೇಳುತ್ತಿರುತ್ತಾರೆ.( ಕೆಲವು ಅಪರೂಪದ ಅಪವಾದಗಳು ಇರಬಹುದು. ಅಂದರೆ ಇವರನ್ನು ವಾಚಾಮಗೋಚರವಾಗಿ ಟೀಕಿಸಬಹುದು ).....

ಆದರೆ ಬಹುತೇಕ ಜನರ ಅಭಿಪ್ರಾಯ ಇದೇ ಆಗಿರುತ್ತದೆ.

ಹಾಗಾದರೆ ಇಷ್ಟೊಂದು ಒಳ್ಳೆಯವರಿಂದ ಕೂಡಿರುವ ನಮ್ಮ ಸಮಾಜ ಅತ್ಯಂತ ಆದರ್ಶ ನಾಗರಿಕ ಸಮಾಜವಾಗಿರಬೇಕಿತ್ತಲ್ಲವೇ ?.......

ಈ ಭ್ರಷ್ಟಾಚಾರ, ಮೋಸ, ವಂಚನೆ, ನಂಬಿಕೆ ದ್ರೋಹ, ಡಾಕ್ಟರ್, ಲಾಯರ್, ಪೋಲೀಸ್, ರಾಜಕಾರಣಿ, ಕಂಟ್ರಾಕ್ಟರ್ ಮುಂತಾದ ಸಮಾಜದ ಎಲ್ಲಾ ಕ್ಷೇತ್ರದ ಜನರ ಮೇಲೆ ಅನುಮಾನ ಏಕೆ. ಇವರೆಲ್ಲರೂ ನಮ್ಮ ತಾಯಿ ತಂಗಿ ಅಣ್ಣ ಅಕ್ಕ ಅಪ್ಪ ಅಮ್ಮ ಮಕ್ಕಳಲ್ಲಿ ಒಬ್ಬರಾಗಿರಬೇಕಲ್ಲವೇ ?

ಆದರೂ ಏಕೆ ವ್ಯವಸ್ಥೆ ಹೀಗಿದೆ......

ಸಮಸ್ಯೆ ಇರುವುದೇ ಇಲ್ಲಿ.

ಸಮಾಜದ ಒಟ್ಟು ಹಿತದ ದೃಷ್ಟಿಯಲ್ಲಿ ನಾವು ಇವರನ್ನು ನೋಡುವುದಿಲ್ಲ. ನಮ್ಮ ವೈಯಕ್ತಿಕ ಬದುಕಿನ ಸ್ವಾರ್ಥದ ಹಿತದಿಂದ ಇವರನ್ನು ಗುರುತಿಸುತ್ತೇವೆ.....

ಹೆಚ್ಚು ಲಂಚ ತಂದು, ಮನೆ ಕಾರು ಒಡವೆ ಪ್ರವಾಸ ಮುಂತಾದ ಮೋಜು ಮಾಡುವ ವ್ಯಕ್ತಿ, ಹೆಂಡತಿ ಮಕ್ಕಳಿಗೆ, ತಂದೆ ತಾಯಿಗಳಿಗೆ ಅತ್ಯಂತ ಪ್ರೀತಿ ಪಾತ್ರವಾಗುತ್ತಾನೆ. ಗಂಡನಿಗೆ ಅಥವಾ ಮಗನಿಗೆ ಬರುವ ಸಂಬಳದಲ್ಲಿ ಇಷ್ಟೊಂದು ಅದ್ದೂರಿ ಜೀವನ ಸಾಧ್ಯವಿಲ್ಲ. ಇದು ಲಂಚದ ಹಣವೇ ಎಂದು ಗೊತ್ತಿದ್ದರೂ ಅದನ್ನು ಸಾಮಾನ್ಯವಾಗಿ ಯಾರೂ ಪ್ರಶ್ನಿಸುವುದಿಲ್ಲ......

ಪ್ರಿಯಕರನಿಗೆ ಅಥವಾ ಗಂಡನಿಗೆ ಮೋಸ ವಂಚನೆ ಮಾಡಿದ ಹೆಣ್ಣು ನಮ್ಮ ಅಕ್ಕ ತಂಗಿ ಮಗಳು ಆಗಿದ್ದರೂ ನಾವು ಸಮರ್ಥಿಸುತ್ತೇವೆ......

ನಮ್ಮ ಸಾಮಾಜಿಕ ವ್ಯವಸ್ಥೆಯಲ್ಲಿ ಅತ್ತೆ ಮಾವನಿಗೊಂದು ನ್ಯಾಯ, ಅಮ್ಮ ಅಪ್ಪನಿಗೆ ಒಂದು ನ್ಯಾಯ, ಮಗ ಮಗಳಿಗೆ ಒಂದು ನಿಯಮ, ಅಳಿಯ ಸೊಸೆಗೊಂದು ನಿಯಮ.

ಇದರ ವಿಸ್ತೃತ ರೂಪವೇ ಇಂದಿನ ಒಟ್ಟು ವ್ಯವಸ್ಥೆಯ ಗೊಂದಲಕ್ಕೆ ಬಹುತೇಕ ಕಾರಣ......

ನ್ಯಾಯ ಅನ್ಯಾಯ, ನೀತಿ ಅನೀತಿಗಳ ವಿಷಯ ಬಂದಾಗ ಭಾವನಾತ್ಮಕ ಜೀವಿಗಳಾದ ನಾವು ಪಕ್ಷಪಾತದ ಧೋರಣೆ ಅನುಸರಿಸುತ್ತೇವೆ.

ನಮ್ಮ ಮಗ ಅತ್ಯಾಚಾರಿ, ವಿಕೃತ ಕಾಮಿ, ಕೊಲೆಪಾತಕನಾದಾಗ ಅದು ನಮಗೆ ಯೌವ್ವನದ ಸಣ್ಣ ಚೇಷ್ಟೇ ಎಂದೇ ಕಾಣುತ್ತದೆ. ಇತರರು ಮಾಡಿದಾಗ ರಸ್ತೆಯಲ್ಲಿ ಗುಂಡು ಹೊಡೆದು ಸಾಯಿಸಬೇಕೆನಿಸುತ್ತದೆ.....

ನನ್ನ ಗಂಡ/ಹೆಂಡತಿ, ಲೋಕಾಯುಕ್ತರ ಬಲೆಯಲ್ಲಿ ಸಿಲುಕಿದಾಗ ಎಷ್ಟೋ ದೊಡ್ಡ ಭ್ರಷ್ಟರ ನಡುವೆ ಇವರು ತುಂಬಾ ಒಳ್ಳೆಯವರು, ಇಡೀ ವ್ಯವಸ್ಥೆ ಇವರಿಗೆ ಮೋಸ ಮಾಡಿದೆ ಎನಿಸುತ್ತದೆ......


ಸಮಸ್ಯೆಗಳ ಬಗ್ಗೆ ಏನೋ ಹೇಳಿದೆ. ಆದರೆ ಇಂದಿನ ಸಾಮಾಜಿಕ, ಆಡಳಿತಾತ್ಮಕ ವ್ಯವಸ್ಥೆಯಲ್ಲಿ ಇದನ್ನು ಮೀರಲು ಸಾಧ್ಯವೇ ?....

ಇದೇನಮ್ಮಮುಂದಿರುವಬಹುದೊಡ್ಡಸವಾಲು. ಮನಸ್ಸುಗಳ ಅಂತರಂಗದ ಚಳವಳಿ ಈ ನಿಟ್ಟಿನಲ್ಲಿ ಹೆಚ್ಚು ಹೆಚ್ಚು ತೊಡಗಿಸಿಕೊಳ್ಳವ ಆಶಯವಿದೆ. ಜನರ ಚಿಂತನಾ ಕ್ರಮವನ್ನು ವಿಶಾಲಗೊಳಿಸಿ ಅವರ ವ್ಯಕ್ತಿತ್ವ ವಿಕಸನಕ್ಕೆ ದಾರಿ ಮಾಡಿಕೊಡುವ ಪ್ರಯತ್ನ ಮುಂದುವರಿಯಲಿದೆ....

ದ್ವೇಷವನ್ನು ಸ್ವಲ್ಪ ಕಡಿಮೆ ಮಾಡಿಕೊಳ್ಳೋಣ,

- **ಪ್ರೀತಿಯನ್ನು ಸ್ವಲ್ಪ ಹೆಚ್ಚು ಮಾಡಿಕೊಳ್ಳೋಣ.....**
- **ಕೋಪವನ್ನು ಸ್ವಲ್ಪ ಕಡಿಮೆ ಮಾಡಿಕೊಳ್ಳೋಣ,**
- **ತಾಳ್ಮೆಯನ್ನು ಸ್ವಲ್ಪ ಹೆಚ್ಚು ಮಾಡಿಕೊಳ್ಳೋಣ.......**
- **ಸ್ವಾರ್ಥವನ್ನು ಸ್ವಲ್ಪ ಕಡಿಮೆ ಮಾಡಿಕೊಳ್ಳೋಣ,**
- **ತ್ಯಾಗವನ್ನು ಸ್ವಲ್ಪ ಹೆಚ್ಚು ಮಾಡಿಕೊಳ್ಳೋಣ......**
- **ಗಲಾಟೆಗಳನ್ನು ಸ್ವಲ್ಪ ಕಡಿಮೆ ಮಾಡಿಕೊಳ್ಳೋಣ,**
- **ಸ್ನೇಹಿತರನ್ನು ಸ್ವಲ್ಪ ಹೆಚ್ಚು ಮಾಡಿಕೊಳ್ಳೋಣ.......**

ಭ್ರಮೆಗಳನ್ನು ಸ್ವಲ್ಪ ದೂರ ಮಾಡೋಣ,
ವಾಸ್ತವಕ್ಕೆ ಸ್ವಲ್ಪ ಹತ್ತಿರವಾಗೋಣ.......
ಕೃತಕತೆ ಸ್ವಲ್ಪ ಕಡಿಮೆ ಮಾಡೋಣ,
ನೈಜತೆಗೆ ಸ್ವಲ್ಪ ಹೆಚ್ಚು ಒತ್ತು ಕೊಡೋಣ......
ಎಲ್ಲವನ್ನೂ ನಿಮ್ಮ ಕುಟುಂಬಕ್ಕಾಗಿ ಮಾಡಿ,
ಆದರೆ ಸಮಾಜಕ್ಕಾಗಿ ಸ್ವಲ್ಪವಾದರೂ ಕೊಡಿ......
ಎಲ್ಲವೂ ನಿಮಗಾಗಿ,
ನೀವು ಮಾತ್ರ ಇತರರಿಗಾಗಿ......
ಮುಖವಾಡ ಮನಸ್ಥಿತಿ ಕಡಿಮೆ ಮಾಡಿ,
ಪ್ರಾಮಾಣಿಕ ಮನಸ್ಥಿತಿಗೆ ಹೆಚ್ಚು ಹತ್ತಿರವಾಗಿ......ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

## ಪ್ರಮುಖ ಸುದ್ದಿ

# ಕ್ರೀಡಾ ವಸತಿ ಶಾಲೆ, ನಿಲಯಗಳ ಪ್ರವೇಶಕ್ಕೆ "ವಿಶೇಷ ಆಯ್ಕೆ ಶಿಬಿರ"

» **ಚಿತ್ರದುರ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ಶಾಲೆ, ನಿಲಯಗಳಿಗೆ ಪ್ರತೀ ವರ್ಷ ಆಯ್ಕೆ ಶಿಬಿರಗಳ ಮೂಲಕ ಕ್ರೀಡಾಪಟುಗಳ ಆಯ್ಕೆ ಕೈಗೊಳ್ಳಲಾಗುತ್ತಿದೆ. ಗ್ರಾಮೀಣ ಭಾಗದ ಬಾಲಕ, ಬಾಲಕಿಯರಿಗೆ ಮತ್ತೊಂದು ವಿಶೇಷ ಅವಕಾಶ ನೀಡುವ ದೃಷ್ಟಿಯಿಂದ 2025-26ನೇ ಸಾಲಿನಲ್ಲಿ ವಿಶೇಷ ಆಯ್ಕೆ ಶಿಬಿರವನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ.

ಏಪ್ರಿಲ್ 17ರಂದು ಕಲಬುರಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಉಡುಪಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್, ವಾಲಿಬಾಲ್, ಕಬಡ್ಡಿ, ಬೀದರ್‌ನ ಜಿಲ್ಲಾ ಕ್ರೀಡಾಂಗಣದಲ್ಲಿ ಸೈಕ್ಲಿಂಗ್, ಬಳ್ಳಾರಿಯ ಫುಟ್ಬಾಲ್ ಕ್ರೀಡಾಂಗಣದಲ್ಲಿ ಪುಟ್ಬಾಲ್, ಗದಗ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಕಿ, ಚಿಕ್ಕಮಗಳೂರಿನ ಜಿಲ್ಲಾ ಕ್ರೀಡಾಂಗಣದಲ್ಲಿ ಜುಡೋ ಆಯ್ಕೆ ಶಿಬಿರಗಳನ್ನು ಆಯೋಜಿಸಲಾಗಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ರಾಜ್ಯದಾದ್ಯಂತ ಒಟ್ಟು 02 ಕ್ರೀಡಾ ವಸತಿ ಶಾಲೆ ಹಾಗೂ 32 ಕ್ರೀಡಾ ವಸತಿ ನಿಲಯಗಳನ್ನು ಹೊಂದಿದೆ. ಈ ಕ್ರೀಡಾ ವಸತಿ ಶಾಲೆ, ನಿಲಯಗಳಿಗೆ 5ನೇ ತರಗತಿ, 8ನೇ ತರಗತಿ ಮತ್ತು ಪ್ರಥಮ ಪಿ.ಯು.ಸಿ. ಹಂತದ ಕ್ರೀಡಾಪಟುಗಳಿಗೆ ಪ್ರವೇಶಾವಕಾಶ ನೀಡಲಾಗುತ್ತಿದ್ದು, ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ವೈಜ್ಞಾನಿಕ ಕ್ರೀಡಾ ತರಬೇತಿ, ಕ್ರೀಡಾ ಸಲಕರಣೆಗಳು, ಕ್ರೀಡಾ ಸಮವಸ್ತ್ರ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ದಿನಭತ್ಯೆ, ಪ್ರಯಾಣ ಭತ್ಯೆ ಇತ್ಯಾದಿಗಳನ್ನು ಒದಗಿಸಲಾಗುತ್ತಿದೆ.ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ಶಾಲೆ, ನಿಲಯಗಳಲ್ಲಿ ತರಬೇತಿ ಪಡೆದ ಅನೇಕ ಕ್ರೀಡಾಪಟುಗಳು ರಾಷ್ಟ್ರೀಯ ಮತ್ತು ಅಂತರ- ರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಸಾಧನೆ ದಾಖಲಿಸಿರುತ್ತಾರೆ. ಪ್ರಖ್ಯಾತ ಕ್ರೀಡಾಪಟುಗಳಾದ ಪ್ರಮೀಳಾ ಅಯ್ಯಪ್ಪ, ಜೆ.ಜೆ. ಶೋಭಾ., ಹೆಚ್.ಎಂ.ಜ್ಯೋತಿ, ಎಸ್.ಡಿ. ಈಶನ್, ಬಾಂಧವ್ಯ, ಶಶಿಕಾಂತ್, ಮಲಪ್ರಭಾ ಜಾಧವ್, ಮೋಹಿತ್ ಹೆಚ್. ಎಸ್., ಪ್ರಿಯಾಂಕ ಪಿ. ಹಲವಾರು ನೂರಾರು ಕ್ರೀಡಾಪಟುಗಳು ಕ್ರೀಡಾ ವಸತಿ ಶಾಲೆ, ನಿಲಯದಿಂದ ಹೊರಹೊಮ್ಮಿದ ಕ್ರೀಡಾಪಟುಗಳಾಗಿರುತ್ತಾರೆ. ಅಲ್ಲದೇ, ಈ ವಸತಿ ಶಾಲೆ, ನಿಲಯಗಳಲ್ಲಿ ತರಬೇತಿ ಪಡೆದ ನೂರಾರು ಕ್ರೀಡಾಪಟುಗಳು ತಮ್ಮ ಕ್ರೀಡಾ ಸಾಧನೆಯ ಹಿನ್ನೆಲೆಯಲ್ಲಿ ಪೊಲೀಸ್, ರೈಲ್ವೆ, ಅರಣ್ಯ, ಆದಾಯ ತೆರಿಗೆ ಇಲಾಖೆ, ಮಹಾಲೇಖಪಾಲರ ಕಛೇರಿ, ಬ್ಯಾಂಕ್‌ಗಳು ಹಾಗೂ ಇನ್ನಿತರೆ ಸರ್ಕಾರಿ ಇಲಾಖೆಗಳಲ್ಲಿ ಉದ್ಯೋಗವನ್ನು ಪಡೆದು, ಜೀವನವನ್ನು ಉತ್ತಮ ರೀತಿಯಲ್ಲಿ ರೂಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿರುತ್ತಾರೆ.

**ಆಯ್ಕೆ ನಿಯಮಗಳು:** ರಾಜ್ಯದ ಯಾವುದೇ ಭಾಗದ ಕ್ರೀಡಾಪಟುಗಳು ಯಾವುದೇ ಸ್ಥಳದ ಆಯ್ಕೆ ಶಿಬಿರದಲ್ಲಿ ಭಾಗವಹಿಸಲು ಮುಕ್ತ ಅವಕಾಶವಿದೆ. 2025-26 ನೇ ಸಾಲಿನ ಪ್ರವೇಶಕ್ಕೆ ಈಗಾಗಲೇ ಆಯೋಜಿಸಲಾದ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸದ ಅಭ್ಯರ್ಥಿಗಳು ಈ ವಿಶೇಷ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸಬಹುದು. ಈಗಾಗಲೇ ಆಯ್ಕೆ ಶಿಬಿರಗಳಲ್ಲಿ ಭಾಗಿಯಾಗಿರುವ ಆದರೆ, ರಾಜ್ಯ ಮಟ್ಟದ ಆಯ್ಕೆ ಶಿಬಿರಕ್ಕೆ ಆಯ್ಕೆಯಾಗದ ಅಭ್ಯರ್ಥಿಗಳು ತಮ್ಮ ಪ್ರದರ್ಶನವನ್ನು ಉತ್ತಮಪಡಿಸಿಕೊಳ್ಳಲು ಉದ್ದೇಶಿಸಿದಲ್ಲಿ, ಈ ಬಗ್ಗೆ ಅರ್ಜಿ ನಮೂನೆಯಲ್ಲಿ ಕಡ್ಡಾಯವಾಗಿ ದಾಖಲಿಸಿ, ವಿಶೇಷ ಆಯ್ಕೆ ಶಿಬಿರದಲ್ಲಿ ಭಾಗವಹಿಸಬಹುದು. ರಾಜ್ಯ ಮಟ್ಟದ ಆಯ್ಕೆ ಶಿಬಿರಕ್ಕೆ ಈಗಾಗಲೇ ಆಯ್ಕೆಯಾಗಿರುವವರು ಈ ವಿಶೇಷ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸುವ ಅವಶ್ಯಕತೆ ಇಲ್ಲ. 8 ನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಪ್ರಸ್ತುತ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, 8ನೇ ತರಗತಿ ಪ್ರವೇಶಕ್ಕೆ ಜೂನ್-2025ಕ್ಕೆಅನ್ವಯವಾಗುವಂತೆ 14 ವರ್ಷ ವಯಸ್ಸಿನ ಒಳಗೆ ಇರಬೇಕು. ಪ್ರಥಮ ಪಿ.ಯು.ಸಿ. ಪ್ರವೇಶ ಬಯಸುವ ಅಭ್ಯರ್ಥಿಗಳ ವಯಸ್ಸು ಜೂನ್-2025 ಕ್ಕೆ ಅನ್ವಯವಾಗುವಂತೆ 18 ವರ್ಷ ವಯಸ್ಸಿನ ಒಳಗೆ ಇರಬೇಕು. ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವವರು ಆಯಾ ಸ್ಥಳಗಳಲ್ಲಿ ಬೆಳಿಗ್ಗೆ 9-00 ಗಂಟೆಗೆ ವರದಿ ಮಾಡಿಕೊಳ್ಳತಕ್ಕದ್ದು. ವಾಲಿಬಾಲ್ ಮತ್ತು ಬಾಸ್ಕೆಟ್ಬಾಲ್ ಹೊರತುಪಡಿಸಿ, ಇತರೆ ಕ್ರೀಡೆಗಳಲ್ಲಿ ಅಸಾಧಾರಣ ಸಾಧನೆ ತೋರುವ ಕ್ರೀಡಾಪಟುಗಳಿಗೆ ಎತ್ತರದ ಅರ್ಹತಾ ಮಾನದಂಡದಲ್ಲಿ ಸಡಿಲಿಕೆ ನೀಡಲಾಗುವುದು. ಈ ಶಿಬಿರಗಳಲ್ಲಿ ಭಾಗವಹಿಸಿ ಆಯ್ಕೆಯಾದ ಕ್ರೀಡಾಪಟುಗಳು ರಾಜ್ಯ ಮಟ್ಟದ ಆಯ್ಕೆ ತರಬೇತಿ ಶಿಬಿರಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿ, ಅರ್ಹರಾದಲ್ಲಿ, ಕ್ರೀಡಾ ವಸತಿ ಶಾಲೆ, ನಿಲಯಗಳಿಗೆ ಪ್ರವೇಶ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಯುವ ಸಹಾಯವಾಣಿ ಸಂಖ್ಯೆ 155265 ಅಥವಾ ನಿಮ್ಮ ಜಿಲ್ಲೆಯ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T